RNI: KNKAN/ 25/A5387 | ಸಂಪಾದಕರು: ರಾಜೇಶ್ವರಿ ಎಸ್. ಓಲೇಕಾರ | ಸಿಇಒ: ಚಂದ್ರಶೇಖರ ಎಸ್.ಕೆ. | ಸಹ ಸಂಪಾದಕರು: ಶಿವಕುಮಾರ

# ಸಮಾಲೋಚನೆ ಸುದ್ದಿ

ಕನ್ನಡ ದಿನ ಪತ್ರಿಕೆ

ನೇರ ನಿಖರ ನಿರ್ದಿಷ್ಟ

ಮೊ.ನಂ: 8095203132 PMG/KA/NK/HVR-59/2026-28 SAMALOCHANE RANEBENNURSUDDI Kannada Daily Morning

ವಯಸ್ಸು ಹೆಚ್ಚುವುದು ಸಹಜ- ಅನಾರೋಗ್ಯ ಸಹಿಸಿಕೊಳ್ಳುವುದು ಅನಿವಾರ್ಯವಲ್ಲ » 2

ಅರ್ಹರಿಗೆ ಗ್ಯಾರಂಟಿ ಯೋಜನೆ ಕೈತಪ್ಪಿದರೆ ಅಧಿಕಾರಿಗಳೇ ಹೊಣೆ! » 3

ರಕ್ತದಾನಕ್ಕೆ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಮುಂದಾಗಬೇಕು » 4

ಸಂಪುಟ (Volume): 1 ಸಂಚಿಕೆ (Issue): 182 ಪುಟ (Page): 4 ದರ Rs. 2 ಬುಧವಾರ 23 ಸೆಪ್ಟೆಂಬರ್ 2026 ● 23 SEPTEMBER 2026 ಹಾವೇರಿ ಧಾರವಾಡ ಗದಗ ಕೊಪ್ಪಳ ವಿಜಯನಗರ ಬೆಳಗಾವಿ ಉತ್ತರ ಕನ್ನಡ samalochanersuddi@gmail.com

ಮಕ್ಕಳಿಗೆ ಇನ್ನೂ ಸಿಕ್ಕಿಲ್ಲ ಶೂ ಸಾಕ್ಸ್ ಭಾಗ್ಯವು ಇಲ್ಲ, ಮಕ್ಕಳ ಶೈಕ್ಷಣಿಕ ಪ್ರಗತಿಗೆ ಹಿನ್ನಡೆ

## ಪಠ್ಯಪುಸ್ತಕವಿಲ್ಲದೆ ಪರೀಕ್ಷೆ ಹೇಗೆ?

### ಮಧ್ಯವಾರ್ಷಿಕ ಪರೀಕ್ಷೆ ಸಮೀಪಿಸುತ್ತಿದ್ದರೂ ಮಕ್ಕಳ ಕೈ ಸೇರದ ಪಠ್ಯಪುಸ್ತಕ

ಗಣೇಶ ಎಸ್.ಎ ಹಾವೇರಿ

ಪ್ರಸಕ್ತ ಶೈಕ್ಷಣಿಕ ವರ್ಷದ ಮಧ್ಯವಾರ್ಷಿಕ ಪರೀಕ್ಷೆಗಳು ಸಮೀಪಿಸುತ್ತಿರುವ ಸಂದರ್ಭದಲ್ಲಿಯೇ ಜಿಲ್ಲೆಯಲ್ಲಿನ ಹಲವು ಸರ್ಕಾರಿ ಹಾಗೂ ಅನುದಾನಿತ ಶಾಲೆಗಳ ವಿದ್ಯಾರ್ಥಿಗಳಿಗೆ ಅಗತ್ಯ ಪ್ರಮಾಣದ ಪಠ್ಯಪುಸ್ತಕಗಳು ಇನ್ನೂ ಸಮರ್ಪಕವಾಗಿ ಪೂರೈಕೆ ಮಾಡದೇ ಇರು ವುದು ಮಕ್ಕಳ ಶೈಕ್ಷಣಿಕ ಪ್ರಗತಿಗೆ ಹಿನ್ನಡೆ ಉಂಟು ಮಾಡುತ್ತದೆ ಎಂಬ ಆತಂಕ ಪೋಷಕರು ವಿದ್ಯಾರ್ಥಿಗಳಲ್ಲಿ ಹೆಚ್ಚಾಗಿಸಿದೆ.

ಸೆ.23 ರಿಂದ ಪ್ರಸಕ್ತ ವರ್ಷದ ಮಧ್ಯವಾರ್ಷಿಕ ಎಸ್ಸೆಸ್ಸೆಲ್ಸಿ ಪರೀಕ್ಷೆ ಹಾಗೂ ಕೆಲವೇ ದಿನಗಳಲ್ಲಿ ಉಳಿದ ತರಗತಿ ಪರೀಕ್ಷೆಗಳು ಆರಂಭವಾಗಲಿವೆ, ಪರೀಕ್ಷೆಗಳಿಗೆ ತಯಾರಾಗಲು ವಿದ್ಯಾರ್ಥಿಗಳ ಕಲಿಕೆಗೆ ಪಠ್ಯಪುಸ್ತಕವೇ ಪ್ರಮುಖ ಆಧಾರ ಆದರೆ ರಾಜ್ಯ ಸರಕಾರ ಹಾಗೂ ಶಿಕ್ಷಣ ಇಲಾಖೆ ಸಮರ್ಪಕವಾಗಿ ಪಠ್ಯ ಪುಸ್ತಕ ಪೂರೈಕೆ ಮಾಡದೇ ಇರುವುದು ವಿದ್ಯಾರ್ಥಿಗಳಲ್ಲಿ ಆತಂಕ ಹೆಚ್ಚಾಗುವಂತೆ ಮಾಡಿದೆ.

#### ಶೂ, ಸಾಕ್ಸ್ ಪೂರೈಕೆಯಿಲ್ಲ

ಪುಸ್ತಕ ಮಾತ್ರವಲ್ಲದೇ ಮಕ್ಕಳಿಗೆ ನೀಡಬೇಕಿದಾಗಿದ್ದ ಶೂ ಸಾಕ್ಸಳ ಪೂರೈಕೆ ಸಹ ಇಲ್ಲಿಯವರೆಗೂ ಆಗಿಲ್ಲ ರಾಜ್ಯ ಹಂತದಲ್ಲಿ ಟೆಂಡರ್ ಪಡೆದ ಗುತ್ತಿಗೆದಾರ ಅರ್ದ ವರ್ಷ ಮುಗಿಯುತ್ತಾ ಬಂದಿದ್ದರೂ ಸಹ ಪೂರೈಕೆ ಮಾಡಿರುವುದು ಶೈಕ್ಷಣಿಕ ವರ್ಷ ಮುಗಿದ ಮೇಲೆ ಪೂರೈಕೆ ಮಾಡಲಿದ್ದಾರೆಯೇ ಎಂಬ ಪ್ರಶ್ನೆ ಹುಟ್ಟು ಹಾಕಿದೆ.

**1.64 ಲಕ್ಷ ವಿದ್ಯಾರ್ಥಿಗಳು:** ಜಿಲ್ಲೆಯಲ್ಲಿ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ 1 ರಿಂದ 10 ನೇ ತರಗತಿಯ ಒಟ್ಟು 1.64 ಲಕ್ಷ ಕ್ಕೂ ಅಧಿಕ ಮಕ್ಕಳಿದ್ದಾರೆ ಅವರೆಲ್ಲರಿಗೂ ಪಠ್ಯ ಪುಸ್ತಕಗಳೆ ಆಧಾರ ತರಗತಿಯಲ್ಲಿ ಶಿಕ್ಷಕರು ಪಾಠ ಬೋಧಿಸಿದ ಬಳಿಕ ಮನೆಯಲ್ಲಿ ಪುನರಾವರ್ತನೆ ಮಾಡುವುದು, ಪರೀಕ್ಷೆಗೆ ಸಿದ್ಧತೆ ನಡೆಸುವುದು ಹಾಗೂ ವಿಷಯವನ್ನು ಆಳವಾಗಿ ಅರ್ಥೈಸಿಕೊಳ್ಳಲು ಪುಸ್ತಕಗಳ ಅಗತ್ಯವಿದೆ. ಆದರೆ ಪರೀಕ್ಷೆಗಳು ಸಮೀಪಿಸುತ್ತಿದ್ದರೂ ಮಕ್ಕಳ ಕೈಯಲ್ಲಿ ಅಗತ್ಯ ಪಠ್ಯಪುಸ್ತಕಗಳೇ ಇಲ್ಲದಿರುವುದು ಶಿಕ್ಷಣ ವ್ಯವಸ್ಥೆಯ ಕಾರ್ಯವೈಖರಿಯ ಬಗ್ಗೆ ಪ್ರಶ್ನೆ ಮೂಡಿಸಿದೆ.

**ಶೇ.25 ರಷ್ಟು ಪುಸ್ತಕ ಕೊರತೆ:** ಈಗಾಗಲೇ ಶಾಲಾ ಆರಂಭಕ್ಕು ಮುನ್ನ ಜಿಲ್ಲೆಯಲ್ಲಿನ ಶಾಲೆಗಳಲ್ಲಿ ಮಕ್ಕಳಿಗೆ ಪುಸ್ತಕ ಪೂರೈಕೆ ಮಾಡ ಲಾಗಿದೆ, ಆದರೆ ಇದರಲ್ಲಿ ಶೇ.25 ರಷ್ಟು ಮಕ್ಕಳಿಗೆ ಮಧ್ಯವಾರ್ಷಿಕ ಪರೀಕ್ಷೆಗೆ ಸಿದ್ಧತೆ ನಡೆಸಬೇಕಾದ ವಿದ್ಯಾರ್ಥಿಗಳು ಪಠ್ಯಪು ಸ್ತಕ ಗಳ ಕೊರತೆಯಿಂದ ಪರದಾಡುವಂತಾಗಿದೆ. ಕೆಲ ವಿದ್ಯಾರ್ಥಿಗಳಿಗೆ ಕೆಲವು ವಿಷಯಗಳ ಪುಸ್ತಕಗಳು ದೊರೆತಿದ್ದರೆ, ಇನ್ನೂ ಕೆಲವು ವಿಷಯಗಳ ಪುಸ್ತಕಗಳು ಲಭ್ಯವಾಗಿಲ್ಲ ಎಂಬ ದೂರುಗಳು ಕೇಳಿಬರುತ್ತಿವೆ. ಇದ-ರಿಂದ ವಿದ್ಯಾರ್ಥಿಗಳು ಪರೀಕ್ಷೆಗೆ ಸಮರ್ಪ ಕವಾಗಿ ಸಿದ್ಧರಾಗಲು ತೊಂದರೆ ಅನುಭವಿಸುವಂತಾಗಿದೆ.

**ಶಿಕ್ಷಕರಿಗೆ ತಲೆ ಬಿಸಿ:** ಸರಕಾರಿ ಶಾಲೆಗಳಲ್ಲಿ ದಾಖಲಾತಿ ಹೆಚ್ಚಳಕ್ಕೆ ಸರಕಾರ ಶಿಕ್ಷಕರ ಮೇಲೆ ಪ್ರತಿ ವರ್ಷ ಒತ್ತಡ ಹೇರುತ್ತಿದೆ. ಸರಕಾ ರ ಹಾಗೂ ಶಿಕ್ಷಣ ಇಲಾಖೆಯ ಆದೇಶದಂತೆ ಶಿಕ್ಷಕರು ಆಯಾ ಗ್ರಾಮ ಹಾಗೂ ಪಟ್ಟಣದಲ್ಲಿ ಪೋಷಕರ ಮನವೋಲಿಸಿ ಶಾಲೆ ಗಳಲ್ಲಿ ಮಕ್ಕಳ ದಾಖಲಾತಿ ಹೆಚ್ಚು ಮಾಡಿದರೂ ಸಹ ಪುಸ್ತಕಗಳ ಕೊರತೆಯನ್ನ ಪೋಷಕರು ಎತ್ತಿ ಹಿಡಿದು ಮುಂದಿನ ವರ್ಷ ಖಾಸಗಿ ಶಾಲೆಗಳಲ್ಲಿ ದಾಖಲಾಗಿ ಮಾಡಿಸುವ ಇರಾದೆ ವ್ಯಕ್ತ ಪಡಿಸುತ್ತಿರುವುದು ಶಿಕ್ಷಕರ ತಲೆ ಬಿಸಿ ಮಾಡಿದೆ.

*ಮೊದಲು ಮೂಲ ಸೌಲಭ್ಯ ಕೊಡಿ:ಸರ್ಕಾರಿ ಶಾಲೆಗಳಲ್ಲಿ ಓದುತ್ತಿರುವ ಬಹುತೇಕ ಮಕ್ಕಳು ಪಠ್ಯಪುಸ್ತಕಗಳಿಗಾಗಿ ಸರ್ಕಾರವನ್ನೇ ಅವಲಂಬಿಸಿದ್ದಾರೆ. ಖಾಸಗಿ ಶಾಲೆಗಳಂತೆ ಹೆಚ್ಚುವರಿ ಪುಸ್ತಕಗಳು ಅಥವಾ ಇತರೆ ಕಲಿಕಾ ಸಾಮಗ್ರಿಗಳನ್ನು ಸುಲಭವಾಗಿ ಖರೀದಿ ಸುವ ಪರಿಸ್ಥಿತಿ ಎಲ್ಲ ಕುಟುಂಬಗಳಲ್ಲೂ ಇರುವುದಿಲ್ಲ.




#### ಪರೀಕ್ಷಾ ಸಿದ್ಧತೆ ಮೇಲೆ ಪರಿಣಾಮ

ಪಠ್ಯಪುಸ್ತಕ ವಿತರಣೆ ವಿಳಂಬವನ್ನು ಕೇವಲ ಆಡಳಿತಾತ್ಮಕ ಲೋಪವೆಂದು ಪರಿಗಣಿಸಬಾರದು. ಒಂದು ದಿನದ ಪಾಠ ತಪ್ಪಿದರೂ ಅದರ ಪರಿಣಾಮ ವಿದ್ಯಾರ್ಥಿಯ ಕಲಿಕೆಯ ಮೇಲೆ ಬೀಳಬಹುದು. ನಿರಂತರವಾಗಿ ಪುಸ್ತಕವಿಲ್ಲದೆ ಕಲಿಯಬೇಕಾದ ಪರಿಸ್ಥಿತಿ ಎದುರಾದರೆ ವಿಷಯದ ಅರಿವು, ಪುನರಾವರ್ತನೆ ಮತ್ತು ಪರೀಕ್ಷಾ ಸಿದ್ಧತೆಯ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ.

ಪರೀಕ್ಷೆ ಬಾಗಿಲು ತಟ್ಟುತ್ತಿರುವ ಈ ಸಂದರ್ಭದಲ್ಲಿ ಸರಕಾರ ಮತ್ತು ಶಿಕ್ಷಣ ಇಲಾಖೆ ಎಚ್ಚೆತ್ತುಕೊಂಡು, ಪ್ರತಿಯೊಬ್ಬ ವಿದ್ಯಾರ್ಥಿಗೂ ಅಗತ್ಯ ಪಠ್ಯಪುಸ್ತಕ ತಲುಪಿಸುವ ಮೂಲಕ ತಮ್ಮ ಜವಾಬ್ದಾರಿಯನ್ನು ನಿಭಾಯಿಸಬೇಕಾಗಿದೆ. ಇಲ್ಲವಾದರೆ, ಪಠ್ಯಪುಸ್ತಕ ವಿತರಣೆ ಯಲ್ಲಿನ ವಿಳಂಬವೇ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಅಡ್ಡಿಯಾಗುವಂತಾಗುವ ಅಪಾಯವಿದೆ.

। ವಿರೂಪಾಕ್ಷಪ್ಪ ಬಳ್ಳಾರಿ, ಮಾಜಿ ಶಾಸಕ

ಜಿಲ್ಲೆಯ ಎಲ್ಲ ತಾಲೂಕುಗಳ ವಿದ್ಯಾರ್ಥಿಗಳಿಗೆ ಓದಿನಲ್ಲಿ ಯಾವುದೇ ತೊಂದರೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. ಶಾಲೆಗಳಿಗೆ ಅಗತ್ಯವಿರುವ ಪಠ್ಯಪುಸ್ತಕಗಳ ಬೇಡಿಕೆಯನ್ನು ಸಂಗ್ರಹಿಸಲಾಗಿದ್ದು, ಕೊರತೆಯಿರುವ ಪುಸ್ತಕಗಳನ್ನು ಶೀಘ್ರದಲ್ಲೇ ಪೂರೈಸುವಂತೆ ಮನವಿ ಮಾಡಲಾಗಿದೆ.

। ಮೋಹನ್ ದಂಡಿನ ಡಿಡಿಪಿಐ ಹಾವೇರಿ.

ಅಲ್ಲದೇ ಪ್ರತಿ ವರ್ಷ ಶಿಕ್ಷಣ ಇಲಾಖೆ ಪೋಷಕರು ಶಿಕ್ಷಕರು ಉತ್ತಮ ಫಲಿತಾಂಶಕ್ಕಾಗಿ ವಿದ್ಯಾರ್ಥಿಗಳ ಮೇಲೆ ಒತ್ತಡ ಹೆಚ್ಚಿಸಲಾಗುತ್ತಿದೆ.ಮತ್ತೊಂದೆಡೆ, ಅವರಿಗೆ ಅಗತ್ಯವಾದ ಮೂಲಭೂತ ಕಲಿಕಾ ಸಾಮ ಗ್ರಿಯನ್ನೇ ಸಮಯಕ್ಕೆ ಸರಿಯಾಗಿ ಒದಗಿಸದಿರುವುದು ಎಷ್ಟರ ಮಟ್ಟಿಗೆ ನ್ಯಾಯಸಮ್ಮತ ಎಂಬ ಪ್ರಶ್ನೆ ಎದುರಾಗಿದೆ.

## ಕಸ್ತೂರಿ ರಂಗನ್ ವರದಿ ನ್ಯೂನ್ಯತೆ ಪರಿಶೀಲನೆಗೆ ಉನ್ನತ ಮಟ್ಟದ ಸಮಿತಿ

### ವಿಧಾನಸಭೆಯಲ್ಲಿ ನಡೆದ ಚರ್ಚೆಗೆ ಉತ್ತರ ನೀಡಿದ ಸಿಎಂ ಡಿಕೆ ಶಿವಕುಮಾರ್

**ಬೆಂಗಳೂರು:** ಕಸ್ತೂರಿ ರಂಗನ್ ವರದಿ ನ್ಯೂನ್ಯತೆ ಬಗ್ಗೆ ಪರಿಶೀಲನೆ ನಡೆಸಲು ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಉನ್ನತ ಮಟ್ಟದ ಸಮಿತಿ ರಚನೆ ಮಾಡಲು ನಿರ್ಣಯ ಕೈಗೊಳ್ಳಲಾಗಿದೆ. ವಿಧಾನಸಭೆಯಲ್ಲಿ ನಡೆದ ಚರ್ಚೆಗೆ ಉತ್ತರ ನೀಡಿದ ಸಿಎಂ ಡಿಕೆ ಶಿವಕುಮಾರ್ ಅವರು, ಸರ್ಕಾರದ ಅಧಿಕೃತ ನಿರ್ಣಯವನ್ನು ಓದಿ ಹೇಳಿದರು.

ಅತ್ಯಂತ ಪಶ್ಚಿಮ ಘಟ್ಟಗಳು ಕರ್ನಾಟಕದ ಪ್ರಮುಖ ನೈಸರ್ಗಿಕ ಸಂಪತ್ತು, ಜೀವವೈವಿಧ್ಯ ಮತ್ತು ಪರಿಸರ ಸಮತೋಲನದ ದೃಷ್ಟಿಯಿಂದ ಇದು ಮಹತ್ವದ ಪ್ರದೇಶವಾಗಿರುತ್ತದೆ. ಜುಲೈ 27, 2026ರಂದು ಭಾರತ ಸರ್ಕಾರವು ಕಸ್ತೂರಿ ರಂಗನ್ ವರದಿಯ ಮೇಲೆ 7ನೇ ಕರಡು ಅಧಿಸೂಚನೆಯನ್ನು ಪ್ರಕಟಿಸಿದೆ. ಕರ್ನಾಟಕದ ಹತ್ತುಜಿಲ್ಲೆಗಳ,1449ಗ್ರಾಮಗಳನ್ನೊಳಗೊಂಡಸುಮಾರು20,668 ಚ.ಕಿ.ಮೀ ವಿಸ್ತೀರ್ಣ ಇಎಸ್ಎ ಅಡಿ ಗುರುತಿಸಲಾಗಿರುತ್ತದೆ.

ಗ್ರಾಮದ ಅರಣ್ಯ ಪ್ರದೇಶದ ಜೊತೆ ಕೃಷಿ ಜಮೀನು, ತೋಟಗಳು, ಮನೆಗಳು ಇಖಂ ಅಡಿಯಲ್ಲಿ ಸೇರಿರುವುದು, ಜಂಟಿ ಸಮೀಕ್ಷೆ ಮಾಡದೆ ಉಪಗ್ರಹ ದತ್ತಾಂಶ ಆಧಾರದ ಮೇಲೆ ಗಡಿ ನಿರ್ಧರಿಸಿರುವುದು, ಬಗರ್ ಹುಕುಂ, ಅರಣ್ಯ ಹಕ್ಕು, ಡೀಮ್ಸ್ ಫಾರೆಸ್ಟ್, ಭೂ ಮಂಜೂರಾತಿ, ಮೇಲ್ಮನವಿ ಮತ್ತು ನ್ಯಾಯಾಂಗ ಪ್ರಕರಣಗಳು ಬಾಕಿ ಇರುವುದು, ಗ್ರಾಮದ ಐದನೇ ಒಂದು ಭಾಗ (1/5) ಅರಣ್ಯ ವ್ಯಾಪ್ತಿಯಲ್ಲಿ ಬರುತ್ತದೆ ಎಂಬ ಆಧಾರದ ಮೇಲೆ ಇಡೀ ಗ್ರಾಮವನ್ನು ಪರಿಸರ ಸೂಕ್ಷ್ಮ ಪ್ರದೇಶ (ESA) ಎಂದು ಘೋಷಿಸಿರುವುದು ಸಾರ್ವಜನಿಕ ವಲಯದಲ್ಲಿ ಸಾಕಷ್ಟು ಅಸಮಾಧಾನಕ್ಕೆ ಕಾರಣವಾಗಿರುತ್ತದೆ ಎಂದು ಉಲ್ಲೇಖಿಸಲಾಗಿದೆ.

**ನಿರ್ಣಯದ ಪ್ರಮುಖ ಅಂಶಗಳೇನು?**

ಕರ್ನಾಟಕ ವಿಧಾನ ಸಭೆಯು ಸರ್ವಾನುಮತದಿಂದ 27ನೇ ಜುಲೈ 2026ರಂದು ಭಾರತ ಸರ್ಕಾರವು ಹೊರಡಿಸಿದ 7ನೇ ಕರಡು ಅಧಿಸೂಚನೆಯನ್ನು ಯಥಾವತ್ತಾಗಿ ಒಪ್ಪಿರುವುದಿಲ್ಲ. ಅರಣ್ಯ ಪ್ರದೇಶದ ಜೊತೆ ಕೃಷಿ ಜಮೀನು, ತೋಟಗಳು, ಮನೆಗಳು



ಮತ್ತು ಸಾರ್ವಜನಿಕ ಸೌಲಭ್ಯಗಳನ್ನು ಇಎಸ್ಎ ಅಡಿಯಲ್ಲಿ ಸೇರಿಸಲಾಗಿರುವುದರಿಂದ, ಮನೆ ನಿರ್ಮಾಣ, ಕುಟುಂಬದ ಆಸ್ತಿ ವಿಭಜನೆ ಮತ್ತು ವಾರಸುದಾರಿಕೆಗೆ ಸಂಬಂಧಪಟ್ಟಂತೆ ಸಮಸ್ಯೆಗಳು ಉದ್ಭವವಾಗುತ್ತವೆ ಎಂದು ನಿರ್ಣಯದಲ್ಲಿ ಆತಂಕ ವ್ಯಕ್ತಪಡಿಸಲಾಗಿದೆ.

ಕರಡು ಅಧಿಸೂಚನೆಯು ಉಪಗ್ರಹ ದತ್ತಾಂಶವನ್ನು ಆಧಾರಿತವಾಗಿದ್ದು, ನಿಖರ ಗಡಿ, ಸರ್ವೇ ನಂಬರ್ ಆಧಾರಿತವಾಗಿರುವುದಿಲ್ಲ. ಜನರಿಗೆ ಪರ್ಯಾಯ ಜೀವನೋಪಾಯಕ್ಕೆ ವಿಶೇಷ ಆರ್ಥಿಕ ನೆರವು ನೀಡಲು ಯಾವುದೇ ಪ್ರಸ್ತಾಪ ಇರುವುದಿಲ್ಲ. ಬಗರ್ ಹುಕುಂ, ಅರಣ್ಯ ಹಕ್ಕು, ಡೀಮ್ಸ್ ಫಾರೆಸ್ಟ್, ಭೂ ಮಂಜೂರಾತಿ, ಮೇಲ್ಮನವಿ ಮತ್ತು ನ್ಯಾಯಾಂಗ ಪ್ರಕರಣಗಳಂತಹ ವಿಷಯಗಳನ್ನು ಪರಿಗಣಿಸಿರುವುದಿಲ್ಲ ಎಂದು ಉಲ್ಲೇಖಿಸಲಾಗಿದೆ.

## ಪರಿಷತ್, ಶಿಕ್ಷಕರ ಕ್ಷೇತ್ರದ ಚುನಾವಣೆಗೆ ದಿನಾಂಕ ನಿಗದಿ

### ಅಕ್ಟೋಬರ್ 23 ರಂದು ಮತದಾನ । 27ರಂದು ಮತ ಎಣಿಕೆ ಫಲಿತಾಂಶ

**ಬೆಂಗಳೂರು:** ಕರ್ನಾಟಕ ವಿಧಾನ ಪರಿಷತ್ತಿನ ಎರಡು ಪದವೀಧರ ಹಾಗೂ ಎರಡು ಶಿಕ್ಷಕರ ಕ್ಷೇತ್ರಗಳು ಸೇರಿದಂತೆ ಒಟ್ಟು ನಾಲ್ಕು ಸ್ಥಾನಗಳಿಗೆ ಭಾರತ ಚುನಾವಣಾ ಆಯೋಗವು ದ್ವೈವಾರ್ಷಿಕ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಅಕ್ಟೋಬರ್ 23 ರಂದು ಮತದಾನ ನಡೆಯಲಿದ್ದು, ಅಕ್ಟೋಬರ್ 27 ರಂದು ಮತ ಎಣಿಕೆ ನಡೆದು ಫಲಿತಾಂಶ ಪ್ರಕಟವಾಗಲಿದೆ. ಕರ್ನಾಟಕದ ಹಾಲಿ ನಾಲ್ವರು ವಿಧಾನ ಪರಿಷತ್ ಸದಸ್ಯರ ಅಧಿಕಾರಾವಧಿಯು 2026ರ ನವೆಂಬರ್ 11ರಂದು ಮುಕ್ತಾಯಗೊಳ್ಳಲಿದ್ದು, ತೆರವಾಗಲಿರುವ ಈ ಸ್ಥಾನಗಳನ್ನು ಭರ್ತಿ ಮಾಡಲು ಚುನಾವಣೆ ನಡೆಸಲಾಗುತ್ತಿದೆ. ಈ ಕ್ಷೇತ್ರಗಳಲ್ಲಿ ಇಂದಿನಿಂದಲೇ ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಗೆ ಬಂದಿದೆ.

**ಇತರೆ ಮೂರು ರಾಜ್ಯಗಳಲ್ಲಿಯೂ ಚುನಾವಣೆ:** ಕರ್ನಾಟಕದ 4 ಸ್ಥಾನಗಳ ಜೊತೆಗೆ ಬಿಹಾರದ 8 (4 ಪದವೀಧರ, 4 ಶಿಕ್ಷಕರ ಕ್ಷೇತ್ರ), ಮಹಾರಾಷ್ಟ್ರದ 5 (3 ಪದವೀಧರ, 2 ಶಿಕ್ಷಕರ ಕ್ಷೇತ್ರ) ಹಾಗೂ ಉತ್ತರ ಪ್ರದೇಶದ 11 (5 ಪದವೀಧರ, 6 ಶಿಕ್ಷಕರ ಕ್ಷೇತ್ರ) ವಿಧಾನ ಪರಿಷತ್ ಸ್ಥಾನಗಳಿಗೂ ಇದೇ ದಿನಾಂಕಗಳಂದು ಚುನಾವಣೆ ನಡೆಯಲಿದೆ ಎಂದು ಚುನಾವಣಾ ಆಯೋಗದ ಕಾರ್ಯದರ್ಶಿ ಸುಮನ್ ಕುಮಾರ್ ದಾಸ್ ತಿಳಿಸಿದ್ದಾರೆ.

#### ನಿವೃತ್ತಿಯಾಗುತ್ತಿರುವ ಸದಸ್ಯರು ಮತ್ತು ಕ್ಷೇತ್ರಗಳ ವಿವರ

ಚಿದಾನಂದ ಎಂ. ಗೌಡ – ಕರ್ನಾಟಕ ಆಗ್ನೇಯ ಪದವೀಧರರ ಕ್ಷೇತ್ರ

ಎಸ್.ವಿ. ಸಂಕನೂರ– ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರ

ಶಶೀಲ್ ಜಿ. ನಮೋಶಿ– ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರ

ಪುಟ್ಟಣ್ಣ– ಬೆಂಗಳೂರು ಶಿಕ್ಷಕರ ಕ್ಷೇತ್ರ

## ಕೆಪಿಎಸ್‌ಸಿ ಬಂದ್ ಮಾಡಲು ಚಿಂತನೆ

### ಸಂಚಲನ ಮೂಡಿಸಿದ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿಕೆ

**ಬೆಂಗಳೂರು:** ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ)ದಲ್ಲಿನಡೆಯುತ್ತಿರುವಅಕ್ರಮಗಳಿಂದಬೇಸತ್ತಿರುವ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಕೆಪಿಎಸ್‌ಸಿಯನ್ನೇ ಸಂಪೂರ್ಣವಾಗಿ ಬಂದ್ ಮಾಡಲು ಚಿಂತಿಸುತ್ತಿರುವುದಾಗಿ ಸ್ಫೋಟಕ ಹೇಳಿಕೆ ನೀಡಿದ್ದಾರೆ.

ವಿಧಾನಸೌಧದಲ್ಲಿ ಮಂಗಳವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಸಿಎಂ ಡಿಕೆ ಶಿವಕುಮಾರ್, "ಸಾಧ್ಯವಾದರೆ ಕೆಪಿಎಸ್‌ಸಿಯನ್ನು ಮುಚ್ಚಬಹುದೇ ಎಂಬುದರ ಕುರಿತು ನಾನು ಪರಿಶೀಲಿಸುತ್ತಿದ್ದೇನೆ" ಎಂದು ಹೇಳಿದ್ದಾರೆ. ಕೆಪಿಎಸ್‌ಸಿ ಹಗರಣದ ಆರೋಪದ ಕುರಿತು ತನಿಖೆ ನಡೆಸಲು ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸುವಂತೆ, ಕರ್ನಾಟಕ ಹೈಕೋರ್ಟ್ ನಿನ್ನೆ (ಸೆ.21–ಸೋಮವಾರ) ನಿರ್ದೇಶನ ನೀಡಿದೆ. ಇದರ ಬೆನ್ನಲ್ಲೇ, ಸಿಎಂ ಡಿಕೆ ಶಿವಕುಮಾರ್ ಅವರು ಕೆಪಿಎಸ್‌ಸಿಯನ್ನೇ ಬಂದ್ ಮಾಡುವ ಬಗ್ಗೆ ಚಿಂತನೆ ನಡೆಸುತ್ತಿರುವುದಾಗಿ ಹೇಳಿ ಸಂಚಲನ ಸೃಷ್ಟಿಸಿದ್ದಾರೆ.

**ಸಿಎಂ ಹೇಳಿದ್ದೇನು?:** ಕೆಪಿಎಸ್‌ಸಿ ನೇಮಕಾತಿಯಲ್ಲಿ ದೊಡ್ಡ ಮಟ್ಟದ ಹಗರಣ ನಡೆದಿದೆ. ನಮಗೆ ವಿದ್ಯಾರ್ಥಿಗಳ ಭವಿಷ್ಯವೇ ಮುಖ್ಯವಾಗಿದ್ದು, ಇಂತಹ ಹಗರಣಗಳನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಹೀಗಾಗಿ ಕೆಪಿಎಸ್‌ಸಿಯನ್ನು ಯಾವ ರೀತಿ ಬಂದ್ ಮಾಡಬೇಕು ಎಂಬುದರ ಬಗ್ಗೆ ಗಂಭೀರವಾಗಿ ಚಿಂತಿಸುತ್ತಿದ್ದೇನೆ" ಎಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಬೆಂಗಳೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳ ಮುಂದೆ ಹೇಳಿದರು.

ಸಿಎಂ ಡಿಕೆ ಶಿವಕುಮಾರ್ ಅವರ ಕೆಪಿಎಸ್‌ಸಿ ಸಂಸ್ಥೆಯನ್ನೇ ಬಂದ್ ಮಾಡುವ ಬಗ್ಗೆ ಮಾತನಾಡಿದ್ದು, ಇದು ರಾಜ್ಯದಲ್ಲಿ ಭಾರೀ ಸಂಚಲನವನ್ನೇ ಸೃಷ್ಟಿಸಿದೆ. ಕೆಪಿಎಸ್‌ಸಿ ಬಂದ್ ಮಾಡುವುದಾದರೆ ಸರ್ಕಾರ ಲೋಕಸೇವಾ ಪರೀಕ್ಷೆಗಳನ್ನು ಹೇಗೆ ನಡೆಸಲಿದೆ ಎಂಬ ಪ್ರಶ್ನೆ ಸಹಜವಾಗಿ ಉದ್ಭವಿಸಿದೆ. ಇದಕ್ಕೂ ಸರ್ಕಾರದ ಬಳಿ ಉತ್ತರವಿದ್ದಂತೆ ತೋರುತ್ತಿದೆ.

ಪರೀಕ್ಷಾ ಪ್ರಾಧಿಕಾರದ ಮೂಲಕ ನೇಮಕಾತಿಗಳನ್ನು ನಡೆಸುವ ಬಗ್ಗೆ, ರಾಜ್ಯ ಸರ್ಕಾರ ಗಂಭೀರ ಚರ್ಚೆಯಲ್ಲಿ ತೊಡಗಿರುವ



ಲಕ್ಷಣಗಳು ಕಂಡುಬರುತ್ತಿವೆ. ಕೆಪಿಎಸ್‌ಸಿ ಬಂದ್ ಮಾಡಿ ಇಲಾಖೆಗಳ ಮೂಲಕವೇ ನೇಮಕಾತಿ ನಡೆಸುವುದು, ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದ ರಾಜ್ಯ ಕಾಂಗ್ರೆಸ್ ಸರ್ಕಾರದ ಉದ್ದೇಶವಾಗಿರಬಹುದು.

ಕೆಪಿಎಸ್‌ಸಿಯನ್ನು ಬಂದ್ ಮಾಡುವ ಬಗ್ಗೆ, ಸಿಎಂ ಡಿಕೆ ಶಿವಕುಮಾರ್ ನೀಡಿರುವ ಹೇಳಿಕೆಗಳು, ಅವರು ನಿರಂತರ ಹಗರಣಗಳಿಂದ ಬೇಸತ್ತಿದ್ದಾರೆ ಎಂಬುದಕ್ಕೆ ಜ್ವಲಂತ ಸಾಕ್ಷಿಯಾಗಿದೆ. "ಎಷ್ಟೇ ಕಠಿಣ ನಿಯಮಗಳನ್ನು ಜಾರಿಗೂ ತಂದರೂ, ಕೆಪಿಎಸ್‌ಸಿಯಲ್ಲಿ ಹಗರಣಗಳು ನಡೆಯುತ್ತಲೇ ಇವೆ. ಹೀಗಾಗಿ ಕಾನೂನು ಮೂಲಕವೇ ಸಂಸ್ಥೆಯನ್ನು ಮುಚ್ಚುವ ಬಗ್ಗೆ ಚರ್ಚೆ ನಡೆದಿದೆ" ಎಂಬ ಡಿಕೆಶಿ ಹೇಳಿಕೆ ಗಮನ ಸೆಳೆದಿದೆ.

ಇಷ್ಟೇ ಅಲ್ಲದೇ ಕೆಪಿಎಸ್‌ಸಿ ಹಗರಣದ ಆರೋಪದ ಕುರಿತು ತನಿಖೆ ನಡೆಸಲು ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸುವಂತೆ ಹೈಕೋರ್ಟ್ ಆದೇಶ ನೀಡಿರುವುದಕ್ಕೂ, ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಬೇಸರ ವ್ಯಕ್ತಪಡಿಸಿದ್ದಾರೆ. ಎಸ್‌ಐಟಿ ತಂಡದಲ್ಲಿ ಯಾರಿರಬೇಕು ಎಂಬುದನ್ನು ರಾಜ್ಯ ಸರ್ಕಾರವೇ ನಿರ್ಧರಿಸಲಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

## ಅಸ್ತ್ರವಾದ ಶಿವಲಿಂಗೇಗೌಡರ ಲಂಚದ ಮಾತು

**ಬೆಂಗಳೂರು:** "ಕೆಲಸ ಮಾಡಿಕೊಟ್ಟ ಅಧಿಕಾರಿಗಳಿಗೆ ಗೌರವಯುತವಾಗಿ ಕೊಡುವುದು ನಿಮ್ಮ ಧರ್ಮ" ಎಂದು ಅಬಕಾರಿ ಸಚಿವ ಶಿವಲಿಂಗೇಗೌಡ ನೀಡಿರುವ ಹೇಳಿಕೆ ಇದೀಗ ಬಿಜೆಪಿಗೆ ಸಿಕ್ಕ ಅಸ್ತ್ರವಾಗಿದೆ. ಸಚಿವರು ಪರೋಕ್ಷವಾಗಿ ಲಂಚ ನೀಡಿ ಎಂದು ಪ್ರಚೋದನೆ ನೀಡಿದ್ದಾರೆ ಎಂದು ಬಿಜೆಪಿ ನಾಯಕರು ಆರೋಪ ಮಾಡಿದ್ದಾರೆ. ಅಲ್ಲದೆ, ಸರ್ಕಾರ ಈ ಬಗ್ಗೆ ತನ್ನ ನಿಲುವೇನು ಎಂಬುವುದನ್ನು ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದ್ದಾರೆ.



ಶನಿವಾರ ಹಾಸನದಲ್ಲಿ ನಡೆದಿದ್ದ ಪ್ರಜಾಸೇವಾ ಆಂದೋಲನದ ಸಂದರ್ಭದಲ್ಲಿ ಅಬಕಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಅವರು ನೀಡಿರುವ ಹೇಳಿಕೆ ಲಂಚ ನೀಡಲು ಪ್ರಚೋದಿಸುವಂತಹ ಹೇಳಿಕೆ ನೀಡಿದ್ದಾರೆ ಎಂಬುವುದು ಆರೋಪವಾಗಿದೆ. ಈಗಾಗಲೇ ಈ ಸಂಬಂಧಿಸಿದಂತೆ ವಕೀಲರ ತಂಡವು ಹಾಸನ ಲೋಕಾಯುಕ್ತ ಕಚೇರಿಗೆ ಸೋಮವಾರ ದೂರು ಸಲ್ಲಿಸಿದೆ. ಇದೀಗ ರಾಜಕೀಯವಾಗಿಯೂ ಈ ವಿಚಾರ ಸದ್ದು ಗದ್ದಲಕ್ಕೆ ಕಾರಣವಾಗಿದೆ.

**ಯಾರು ಏನಂದರು?:** ಬಿಜೆಪಿ ಶಾಸಕ ಸಿ ಟಿ ರವಿ ಮಾತನಾಡಿ, "ಸಚಿವರಾದ ಶಿವಲಿಂಗೇಗೌಡ ಮಾತಿನ ಬಗ್ಗೆ ಸರ್ಕಾರದ ನಿಲುವು ಏನು ಎಂಬುದನ್ನು ಸ್ಪಷ್ಟಪಡಿಸಬೇಕು.ಮಾಡಿದ ಕೆಲಸಕ್ಕೆ ಧರ್ಮ ಅಂತ ಹೇಳಿದ್ದಾರೆ. ಸರ್ಕಾರದ ಸಹಮತ ಇದ್ರೆ ಯಾವ ಇಲಾಖೆಯಲ್ಲಿ ಎಷ್ಟು ರೇಟ್ ಕಾರ್ಡ್ ಇದೆ ಎಂಬುವುದನ್ನು ಬಹಿರಂಗ ಪಡಿಸಿ ನಾನು ಸ್ವಾಗತ ಮಾಡುತ್ತೇನೆ" ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಧರ್ಮ ಅಂತ ಹೇಳಿದ್ದೀರಾ, ಇದನ್ನು ಲಂಚ ಅಂತ ಕರೆಯುತ್ತಾರೆ. ಈ ಬಗ್ಗೆ ಸಿಎಂ ಅವರು ಸ್ಪಷ್ಟತೆ ನೀಡಬೇಕು. ಪ್ರಜಾ ಸೇವಾ ಕಾರ್ಯಕ್ರಮದಲ್ಲಿ ಕೊಟ್ಟ ಮಾತಿನ ನಿಲುವು ಏನು? ಜನರಿಗೆ ಪಾಪದ ಭೀತಿ ಕಾಡೋದು ಬೇಡ. ಹಾಗಾಗಿ ರೇಟ್ ಕಾರ್ಡ್ ಎಷ್ಟು ಅಂತ ಹಾಕಿಬಿಡಿ. ಭ್ರಷ್ಟಾಚಾರಕ್ಕೆ ಧರ್ಮದ ಲೇಪ ಕೊಟ್ಟು ಅಧರ್ಮದ ಕೆಲಸ ಮಾಡಬೇಡಿ ಎಂದು ತಿರುಗೇಟು ನೀಡಿದರು.

ಬಿಜೆಪಿ ಶಾಸಕ ಭರತ್ ಶೆಟ್ಟಿ ಮಾತನಾಡಿ, ಸಚಿವ ಶಿವಲಿಂಗೇಗೌಡ ನೀಡಿದ್ದ "ಗೌರವಾರ್ಥವಾಗಿ ಕೊಡಬೇಕು" ಎಂಬ ಹೇಳಿಕೆಯ ಬೆನ್ನಲ್ಲೇ ಭ್ರಷ್ಟಾಚಾರ ಜಾಸ್ತಿಯಾಗಿದೆ. ಬಜ್ಪೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪೊಲೀಸ್ ಅಧಿಕಾರಿಯೊಬ್ಬರು ಲಂಚ ಸ್ವೀಕಾರ ಮಾಡುವ ಸಂದರ್ಭದಲ್ಲಿ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ" ಎಂದು ವಾಗ್ದಾಳಿ ನಡೆಸಿದರು.

**ನಂದಿದ್ದರು ಸಚಿವರು?:** ಪ್ರಜಾಸೇವಾ ಆಂದೋಲನದ ಸಂದರ್ಭದಲ್ಲಿ ಅಬಕಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಅವರು ನೀಡಿರುವ ಹೇಳಿಕೆ ವಿವಾದಕ್ಕೆ ಕಾರಣವಾಗಿತ್ತು. "ಕೆಲಸ ಮಾಡಿಕೊಟ್ಟ ಅಧಿಕಾರಿಗಳಿಗೆ ಗೌರವಯುತವಾಗಿ ಕೊಡುವುದು ನಿಮ್ಮ ಧರ್ಮ" ಎಂದಿದ್ದರು ಶಿವಲಿಂಗೇಗೌಡರು. ಅಲ್ಲದೆಬಲವಂತವಾಗಿ ಹಣ ಕೀಳುವುದು ಸರಿಯಲ್ಲ ಎಂದೂ ಹೇಳಿಕೊಂಡಿದ್ದರು. ಸಕಲೇಶಪುರದಲ್ಲಿ ಶನಿವಾರ ನಡೆದ ಪ್ರಜಾಸೇವಾ ಆಂದೋಲನ ಸಭೆಯಲ್ಲಿ ಸಾರ್ವಜನಿಕರ ಅಹವಾಲು ಆಲಿಸುತ್ತಿದ್ದ ಸಚಿವ ಕೆ.ಎಂ. ಶಿವಲಿಂಗೇಗೌಡ ನೀಡಿದ್ದ ಈ ಹೇಳಿಕೆ ಭಾರೀ ವಿವಾದಕ್ಕೆ ಕಾರಣವಾಗಿತ್ತು.

**ಸ್ಪಷ್ಟನೆ ನೀಡಿದ್ದ ಜಿಲ್ಲಾಧಿಕಾರಿ:** ಸಚಿವರ ಹೇಳಿಕೆಯ ಬೆನ್ನಲ್ಲೇ ಪಕ್ಕದಲ್ಲಿದ್ದ ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಈ ಬಗ್ಗೆ ಸ್ಪಷ್ಟನೆ ನೀಡಲು ಮುಂದಾಗಿದ್ದರು. ಈ ವೇಳೆ ಸಚಿವರು, 'ನಾನು ಲಂಚ ಕೊಡಿ, ದುಡ್ಡು ಕೊಡಿ ಎಂದು ಹೇಳಿಲ್ಲ. ಗೌರವ ಕೊಡಿ ಎಂದು ಹೇಳಿದ್ದೇನೆ' ಎಂದು ಮಾತನ್ನು ಸಮರ್ಥಿಸಿಕೊಂಡಿದ್ದರು.

## ನಕ್ಸಲ್ ಚಳವಳಿ ಹುಟ್ಟಲು ಅರಣ್ಯ ಇಲಾಖೆ ಕಾರಣ

**ಬೆಂಗಳೂರು:** ಪಶ್ಚಿಮ ಘಟ್ಟ ಪ್ರದೇಶಗಳಲ್ಲಿ ನಕ್ಸಲ್ ಚಳವಳಿ ಹುಟ್ಟಲು ಅರಣ್ಯ ಇಲಾಖೆ ಕಾರಣ ಎಂದು ಬಿಜೆಪಿ ಶಾಸಕ ಸುನೀಲ್ ಕುಮಾರ್ ಗಂಭೀರ ಆರೋಪ ಮಾಡಿದ್ದಾರೆ. ವಿಧಾನಸಭೆಯಲ್ಲಿ ಕಸ್ತೂರಿ ರಂಗನ್ ವರದಿ ಜಾರಿ ವಿಚಾರವಾಗಿ ಮಾತನಾಡುವ ಸಂದರ್ಭದಲ್ಲಿ



ಕರಾವಳಿ, ಮಲೆನಾಡು ಭಾಗದ ಜನರ ಸಮಸ್ಯೆಗಳ ಬಗ್ಗೆ ಸದನಕ್ಕೆ ವಿವರಿಸಿದ ಅವರು, ಇಕೋ ಸೆನ್ಸಿಟಿವ್ ಝೋನ್ ಹಾಗೂ ಇಕೋ ಸೆನ್ಸಿಟಿವ್ ಏರಿಯಾ ಬಗ್ಗೆ ತಮ್ಮ ಆತಂಕ ಹೊರಹಾಕಿದರು.

ನಮ್ಮ ಜಿಲ್ಲೆಗಳಲ್ಲಿ ಅರಣ್ಯ ಇಲಾಖೆ ಅಂದ್ರೆ ಅರಣ್ಯ ಸಂರಕ್ಷಣೆ ಮಾಡೋದು ಬಿಟ್ಟು ಸಮಸ್ಯೆ ಮಾಡೋದೇ ಅರಣ್ಯ ಇಲಾಖೆ ಆಗಿದೆ. ಹೀಗಾಗಿ ನಮ್ಮ ಭಾಗದಲ್ಲಿ ನಕ್ಸಲ್ ಚಟುವಟಿಕೆ ಹುಟ್ಟಿದ್ದು. ನಮ್ಮ ಜನರು ನಕ್ಸಲರಿಗೆ ಬೆಂಬಲ ಕೊಡಲಿಲ್ಲ. ನಾವು ಸರ್ಕಾರದ ಪರವಾಗಿಯೇ ಇದ್ದೆವು. ಹಾಗಾಗಿ ಪಶ್ಚಿಮ ಘಟ್ಟದಲ್ಲಿ ನಕ್ಸಲ್ ಚಳವಳಿ ಬೆಳೆದಿಲ್ಲ ಎಂದರು.

ಅರಣ್ಯ ಇಲಾಖೆಯ ಒಂದೊಂದು ಸುತ್ತೋಲೆಗಳು ಒಂದೊಂದು ರೀತಿ ಆಗಿವೆ. ಕೊಟ್ಟಿಗೆ ಮನೆ, ಅಡುಗೆ ಮನೆ ಕಟ್ಟುವುದಕ್ಕೂ ಒಂದೊಂದು ರೀತಿ ಅನುಮತಿ ಪಡೆಯಬೇಕಾಗಿದೆ. ಎಲ್ಲದಕ್ಕೂ ರಿಜನಲ್ ಕಮೀಷನರ್ ಅನುಮತಿ ಪಡೆಯಬೇಕಾಗಿದೆ ಎಂದು ವಿವರ ನೀಡಿದರು. ರಾಜ್ಯದಲ್ಲಿ 23 ಅಭಯಾರಣ್ಯಗಳು ಇವೆ. ಕಾಳಿ,ಭದ್ರಾ, ದಾಂಡೇಲಿ ಸೇರಿ ಹಲವು ಅಭಯಾರಣ್ಯಗಳು ಇವೆ. ವಿಪರ್ಯಾಸವೆಂದರೆ, ಲ್ಯಾಪ್ ಟಾಪ್ ಮುಂದೆ ಕುಳಿತವರು ಪಶ್ಚಿಮ ಘಟ್ಟಗಳ ರಕ್ಷಣೆ ಬಗ್ಗೆ ಮಾತಾಡ್ತಾರೆ ಎಂದು ತಿರುಗೇಟು ನೀಡಿದರು. ಸಿಎಂ ಭಾವನೆಗಳ ಮೇಲೆ ಅಲ್ಲ ಬದುಕು ಮೇಲೆ ರಾಜಕೀಯ ಅಂತಾರೆ. ಪಶ್ಚಿಮ ಘಟ್ಟದ ಜನ ಇವೆರಡರ ಮೇಲೆ ಜೀವನ ಕಟ್ಟಿ-ಕೊಂಡಿದ್ದಾರೆ. ಅಲ್ಲಿ ಭಾವನೆಗಳು, ಬದುಕು ಎಲ್ಲವೂ ಇದೆ ಎಂದು ವಿವರಿಸಿದರು. ಜನ ಸಂಸ್ಕೃತಿ ತೆಗೆದು ಪರಿಸರದ ಉಳಿವು ಕಷ್ಟವಾಗಿದೆ. ಜನರನ್ನು ಉಳಿಸಿದರೆ ಮಾತ್ರ ಪರಿಸರ ಉಳಿಯುತ್ತೆ. ಪಶ್ಚಿಮ ಘಟ್ಟದ ಸೆಲ್ಫೀ ಪಾಯಿಂಟ್ ಅಲ್ಲ. ಅದು ಬದುಕಿನ ಪಾಯಿಂಟ್. ಪರಿಸರ ಉಳಿಸುವವರಲ್ಲಿ ನಾವು ಮೊದಲಿಗರು ಎಂದರು.

SAMALOCHANE RANEBENNURSUDDI
Kannada Daily Morning

ಸಮಾಲೋಚನೆ ಸುದ್ದಿ

ಬುಧವಾರ 23 ಸೆಪ್ಟೆಂಬರ್ 2026
23 SEPTEMBER 2026



# ಅರ್ಹರಿಗೆ ಗ್ಯಾರಂಟಿ ಯೋಜನೆ ಕೈತಪ್ಪಿದರೆ ಅಧಿಕಾರಿಗಳೇ ಹೊಣೆ!

**ತಾಂತ್ರಿಕ ಕಾರಣದಿಂದ ಫಲಾನುಭವಿಗಳ ಹೆಸರು ಕೈಬಿಡದಂತೆ ಎಚ್ಚರಿಕೆ | ಪುನರ್ ಪರಿಶೀಲನೆ ವೇಳೆ ಅರ್ಹರಿಗೆ ಅನ್ಯಾಯವಾಗದಂತೆ ಕ್ರಮಕ್ಕೆ ಸೂಚನೆ**

**ಸಮಾಲೋಚನೆ ಸುದ್ದಿ ರಾಣೇಬೆನ್ನೂರು**

ರಾಜ್ಯ ಸರ್ಕಾರ ಬಡವರು, ಶ್ರೀಸಾಮಾನ್ಯರು, ಹಿಂದುಳಿದವರು ಹಾಗೂ ಪರಿಶಿಷ್ಟ ಜಾತಿ–ಪರಿಶಿಷ್ಟ ಪಂಗಡ ಸೇರಿದಂತೆ ಅರ್ಹ ಫಲಾನುಭವಿಗಳ ಆರ್ಥಿಕ ಸಬಲೀಕರಣಕ್ಕಾಗಿ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳು ಅರ್ಹರಿಗೆ ಸಮರ್ಪಕವಾಗಿ ತಲುಪಬೇಕು. ಪರಿಶೀಲನೆ ಸಂದರ್ಭದಲ್ಲಿ ಅನರ್ಹ ಫಲಾನುಭವಿಗಳು ಸೇರ್ಪಡೆಯಾಗಿರುವುದು ಅಥವಾ ಅರ್ಹ ಫಲಾನುಭವಿಗಳು ಕೈಬಿಟ್ಟಿರುವುದು ಕಂಡುಬಂದರೆ ಅದಕ್ಕೆ ಸಂಬಂಧಿಸಿದ ಅಧಿಕಾರಿಗಳೇ ಹೊಣೆಗಾರರಾಗಬೇಕಾಗುತ್ತದೆ ಎಂದು ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಮಂಜಪ್ಪ ಹಲವಾಗಲ ಎಚ್ಚರಿಸಿದರು.

ಮಂಗಳವಾರ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ಜಿಪಂ, ತಾಪಂ ಆಶ್ರಯದಲ್ಲಿ ನಡೆದ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆಯಲ್ಲಿ ಯೋಜನೆಗಳ ಪ್ರಗತಿ ಪರಿಶೀಲಿಸಿ ಅವರು ಮಾತನಾಡಿದರು.

ತಾಂತ್ರಿಕ ಅಥವಾ ಇತರೆ ಕಾರಣಗಳಿಂದ ಅರ್ಹ ಫಲಾನುಭವಿಗಳು ಯೋಜನೆಯಿಂದ ವಂಚಿತರಾಗಿದ್ದರೆ ಕೂಡಲೇ ಸಮಸ್ಯೆ ಸರಿಪಡಿಸಬೇಕು. ಗೃಹಲಕ್ಷ್ಮಿ,ಯುವನಿಧಿ,ಗೃಹಜ್ಯೋತಿ,ಅನ್ನಭಾಗ್ಯಹಾಗೂಶಕ್ತಿಯೋಜನೆಗಳ ಫಲಾನುಭವಿಗಳ ಕುರಿತು ಸರ್ಕಾರ ಪುನರ್ ಪರಿಶೀಲನೆ ನಡೆಸುತ್ತಿರುವ ಹಿನ್ನೆಲೆಯಲ್ಲಿ, ಅರ್ಹರಿಗೆ ಯಾವುದೇ ಕಾರಣಕ್ಕೂ ಅನ್ಯಾಯವಾಗದಂತೆ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಸಮಿತಿ ಸದಸ್ಯರು ನೀಡಿದ ಸಲಹೆ–ಸೂಚನೆಗಳನ್ನು ಚಾಚೂ ತಪ್ಪದೆ ಪಾಲಿಸಿ, ಮುಂದಿನ ಸಭೆಯೊಳಗೆ ಅಗತ್ಯ ತಿದ್ದುಪಡಿ ಕೈಗೊಂಡು ಅರ್ಹ ಫಲಾನುಭವಿಗಳಿಗೆ ನ್ಯಾಯ ಒದಗಿಸಬೇಕು. ಯಾವುದೇ ಫಲಾನುಭವಿಯನ್ನು ಅನರ್ಹಗೊಳಿಸುವ ಪರಿಸ್ಥಿತಿ ಎದುರಾದರೆ ಅದರ ವಿವರವನ್ನು ಸಮಿತಿಯ ಗಮನಕ್ಕೆ ತರಬೇಕು ಎಂದು ಹೇಳಿದರು.

ಆದಾಯ ತೆರಿಗೆ ಅಥವಾ ಜಿಎಸ್‌ಟಿ ಪಾವತಿದಾರರಲ್ಲದಿದ್ದರೂ ಕೆಲ ಅರ್ಹ ಫಲಾನುಭವಿಗಳನ್ನು ಅನರ್ಹಗೊಳಿಸಿರುವುದು ಕಂಡುಬಂದಿದೆ. ಗ್ರಾಮ ಒನ್ ಹಾಗೂ ಸೇವಾ ಸಿಂಧು ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸುವ ವೇಳೆ ಉಂಟಾದ ತಪ್ಪು ಗ್ರಹಿಕೆಯಿಂದಾಗಿ ಇಂತಹ ಫಲಾನುಭವಿಗಳು ಯೋಜನೆಯಿಂದ ವಂಚಿತರಾಗಿರುವುದು ಗಮನಕ್ಕೆ ಬಂದಿದೆ ಎಂದು ಅಧಿಕಾರಿಗಳು ಸಭೆಗೆ ತಿಳಿಸಿದರು.




**ಯುವನಿಧಿ: 2,666 ಫಲಾನುಭವಿಗಳಿಗೆ 8 ಕೋಟಿ:** ಈ ವರ್ಷದ ಜನವರಿಯಿಂದ ಜುಲೈ ಅಂತ್ಯದವರೆಗೆ ಯುವನಿಧಿ ಯೋಜನೆಯಡಿ ಪದವಿ ಹಾಗೂ ಡಿಪ್ಲೊಮಾ ಪೂರ್ಣಗೊಳಿಸಿದ 2,666 ಫಲಾನುಭವಿಗಳಿಗೆ 8 ಕೋಟಿ ಮೊತ್ತವನ್ನು ಡಿಬಿಟಿ ಮೂಲಕ ಪಾವತಿಸಲಾಗಿದೆ ಎಂದು ತಿಳಿಸಲಾಯಿತು.

ಗೃಹಜ್ಯೋತಿ ಯೋಜನೆಯಡಿ ಬೆಸ್ಕಾಂ ವ್ಯಾಪ್ತಿಯಲ್ಲಿ 52,632 ಫಲಾನುಭವಿಗಳಿಗೆ 115 ಕೋಟಿ ವೆಚ್ಚ ಮಾಡಲಾಗಿದೆ. ಹೆಸ್ಕಾಂ 2 ವ್ಯಾಪ್ತಿಯಲ್ಲಿ 39,510 ಫಲಾನುಭವಿಗಳಿಗೆ 4 ಕೋಟಿ ವೆಚ್ಚವಾಗಿದೆ ಎಂದು ಸಭೆಯಲ್ಲಿ ಮಾಹಿತಿ ನೀಡಲಾಯಿತು.

ರಾಣೇಬೆನ್ನೂರು ತಾಲೂಕಿನಲ್ಲಿ ಒಟ್ಟು 76,280 ಪಡಿತರ ಚೀಟಿಗಳಿದ್ದು, ಕಳೆದ ವರ್ಷ 6,501 ಹೊಸ ಅರ್ಜಿಗಳು ಸ್ವೀಕೃತವಾಗಿವೆ. ಈ ಪೈಕಿ 1,937 ಅರ್ಜಿಗಳನ್ನು ತಿರಸ್ಕರಿಸಲಾಗಿದೆ ಎಂದು ತಿಳಿಸಲಾಯಿತು.

ಶಕ್ತಿ ಯೋಜನೆಯಡಿ ಜೂನ್‌ನಿಂದ ಈವರೆಗೆ 4.21 ಕೋಟಿ ಪ್ರಯಾಣಿಕರು ಪ್ರಯಾಣಿಸಿದ್ದು, ಇದಕ್ಕಾಗಿ 139 ಕೋಟಿ ಮೊತ್ತವನ್ನು ಮೀಸಲಿಡಲಾಗಿದೆ ಎಂದು ಸಭೆಯಲ್ಲಿ ಮಾಹಿತಿ ನೀಡಲಾಯಿತು.

ಸಭೆಯಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸಮಿತಿಯ ಕಾರ್ಯದರ್ಶಿ ಡಾ. ವೆಂಕಟೇಶ್ ಸಣ್ಣಬಿದರಿ, ಸಮಿತಿ ಸದಸ್ಯರಾದ ಮಂಜನಗೌಡ ಪಾಟೀಲ, ನಾಗರಾಜ ಕುಸಗೂರ್, ಚಂದ್ರಪ್ಪ ಬೇಡರ್, ರಾಜೇಂದ್ರ ಅಂಬಿಗೇರ್, ರವಿಮಲ್ಲಳ್ಳಿ, ಮಂಜುನಾಥ ಸಣ್ಣಿಂಗಣ್ಣನವರ, ಗೌರಮ್ಮ ತೆಗ್ಗಿನ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

### ಗ್ರಾಪಂ ಮಟ್ಟದಲ್ಲೂ ಸಮಿತಿ ರಚನೆ

**ಶೀಘ್ರದಲ್ಲೇ ತಾಲೂಕಿನ ಎಲ್ಲ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 6 ಸದಸ್ಯರನ್ನೊಳಗೊಂಡ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ರಚಿಸಲಾಗುವುದು. ಇದೇ ವೇಳೆ 100 ಸದಸ್ಯರ ಪೈಕಿ 15 ಸದಸ್ಯರನ್ನು ಒಳಗೊಂಡ ಭಾರತ್ ಜೋಡೋ ಸಂಘ ರಚನೆಗೂ ಈಗಾಗಲೇ ಸೂಚನೆ ನೀಡಲಾಗಿದೆ. ಈ ಸಂಘಗಳ ಚಟುವಟಿಕೆ, ಪ್ರತಿಭೆಗಳ ಉತ್ತೇಜನ ಸೇರಿದಂತೆ ವಿವಿಧ ಕಾರ್ಯಗಳಿಗೆ ಸರ್ಕಾರ ಪ್ರತಿವರ್ಷ 10 ಲಕ್ಷ ಅನುದಾನ ನೀಡಲಿದೆ ಎಂದು ಮಂಜಪ್ಪ ಹಲವಾಗಲ ತಿಳಿಸಿದರು.**

## ವಿದ್ಯಾರ್ಥಿಗಳು ಓದಿನ ಜೊತೆಗೆ ಕ್ರೀಡೆಗಳಲ್ಲಿ ಭಾಗವಹಿಸಬೇಕು: ಎಂ.ಎಂ. ಮೈದೂರ

**ಹಾವೇರಿ:** ವಿದ್ಯಾರ್ಥಿಗಳು ಪಾಠದ ಜತೆಗೆ ಕ್ರೀಡೆಯಲ್ಲೂ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ಸಮತೋಲನದಲ್ಲಿಡಲು ಕ್ರೀಡೆ ಪ್ರಮುಖವಾಗಿದ್ದು, ತಾಲೂಕು ಹಾಗೂ ಜಿಲ್ಲಾ ಮಟ್ಟದ ಕ್ರೀಡಾಕೂಟಗಳು ಪ್ರತಿಭೆಗಳಿಗೆ ಉತ್ತಮ ವೇದಿಕೆಯಾಗಿವೆ ಎಂದು ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎಂ.ಎಂ. ಮೈದೂರು ಹೇಳಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಪದವಿ ಪೂರ್ವ ಶಾಲಾ ಶಿಕ್ಷಣ ಇಲಾಖೆಯ 2026–27ನೇ ಸಾಲಿನ ಜಿಲ್ಲಾ ಮಟ್ಟದ ಕ್ರೀಡಾ–ಕೂಟ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿ ವರ್ಷ ಕ್ಲಸ್ಟರ್ ಮಟ್ಟದಿಂದ ತಾಲೂಕು ಹಾಗೂ ಜಿಲ್ಲಾ ಮಟ್ಟದವರೆಗೆ ಕ್ರೀಡಾಕೂಟಗಳನ್ನು ಆಯೋಜಿಸಲಾಗುತ್ತಿದೆ. ವಿದ್ಯಾರ್ಥಿಗಳು ಆಟದಲ್ಲಿ ಮುಂದಿದ್ದಂತೆ ಪಾಠದಲ್ಲಿ ಸಾಧನೆ ಮಾಡಬೇಕು. ಕ್ರೀಡೆ ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ಸದೃಢಗೊಳಿಸುವ ಜತೆಗೆ ಶಿಸ್ತು ಮತ್ತು ಆತ್ಮವಿಶ್ವಾಸ ಬೆಳೆಸುತ್ತದೆ ಎಂದರು.

ಅಂತರರಾಷ್ಟ್ರೀಯ ಮಟ್ಟದಲ್ಲಿ ಭಾರತ ಇನ್ನಷ್ಟು ಪದಕಗಳನ್ನು ಗೆಲ್ಲಬೇಕಾದರೆ ಕ್ರೀಡಾ ಪ್ರತಿಭೆಗಳಿಗೆ ಬಾಲ್ಯದಿಂದಲೇ ಉತ್ತಮ ಅವಕಾಶ ಹಾಗೂ ಪ್ರೋತ್ಸಾಹ ನೀಡಬೇಕು. ತಾಲೂಕು ಮತ್ತು ಜಿಲ್ಲಾ ಮಟ್ಟದ ಕ್ರೀಡಾಕೂಟಗಳೇ ಇದಕ್ಕೆ ಬುನಾದಿಯಾಗಿದ್ದು, ಇಲ್ಲಿ ಉತ್ತಮ ಸಾಧನೆ ಮಾಡುವ ಕ್ರೀಡಾಪಟುಗಳು ರಾಜ್ಯ, ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟಕ್ಕೆ ಮುನ್ನಡೆಯಬೇಕು ಎಂದು ಹೇಳಿದರು.

ಕ್ರೀಡೆಯಲ್ಲಿ ಉತ್ತಮ ಸಾಧನೆ ಮಾಡುವವರಿಗೆ ಸರ್ಕಾರದಿಂದವಿವಿಧಸೌಲಭ್ಯಗಳುಹಾಗೂಉದ್ಯೋಗಾವಕಾಶಗಳಲ್ಲಿ ಮೀಸಲಾತಿಯಂತಹ ಅವಕಾಶಗಳಿವೆ. ವಿದ್ಯಾರ್ಥಿಗಳು ಕ್ರೀಡೆಯಲ್ಲಿ ತಮ್ಮ ಪ್ರತಿಭೆ ಪ್ರದರ್ಶಿಸಿ ಇಂತಹ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವ ರುದ್ರಪ್ಪ ಲಮಾಣಿ ಅವರ ಪ್ರಯತ್ನದಿಂದ ಜಿಲ್ಲಾ ಕ್ರೀಡಾಂಗಣದಲ್ಲಿ ಸುಮಾರು ರೂ.10 ಕೋಟಿ ವೆಚ್ಚದಲ್ಲಿ ಸಿಂಥೆಟಿಕ್ ಟ್ರ್ಯಾಕ್ ನಿರ್ಮಾಣಕ್ಕೆ ಮಂಜೂರಾತಿ ದೊರೆತಿದ್ದು, ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದೆ. ಶೀಘ್ರದಲ್ಲೇ ಕಾಮಗಾರಿ ಆರಂಭವಾಗಲಿದೆ ಎಂದು ತಿಳಿಸಿದರು.

ಕ್ರೀಡಾಪಟುಗಳಿಗೆ ಉತ್ತಮ ಮೂಲಸೌಕರ್ಯ ಕಲ್ಪಿಸುವ ಉದ್ದೇಶದಿಂದ ಕ್ರೀಡಾಂಗಣದ ಅಭಿವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ವಿದ್ಯಾರ್ಥಿಗಳು ಕ್ರೀಡಾಕೂಟವನ್ನು ಸ್ಪರ್ಧಾತ್ಮಕ ಮನೋಭಾವದಿಂದ ಸ್ವೀಕರಿಸಬೇಕು. ಸೋಲು–ಗೆಲುವು ಸಹಜವಾಗಿದ್ದು, ಸೋಲನ್ನು ಮುಂದಿನ ಗೆಲುವಿನ ಮೆಟ್ಟಿಲಾಗಿ ಪರಿಗಣಿಸಬೇಕು ಎಂದು ಸಲಹೆ ನೀಡಿದರು.

ಪ್ರಾದೇಶಿಕ ಸಾರಿಗೆ ಅಧಿಕಾರಿ ವಿನಯಾ ಕಾಟೋಕರ್ ಮಾತನಾಡಿ ಶಿಕ್ಷಣಕ್ಕೆ ಎಷ್ಟು ಮಹತ್ವವಿದೆಯೋ ಕ್ರೀಡೆಗೂ ಅಷ್ಟೇ ಮಹತ್ವ ನೀಡಬೇಕು. ಕ್ರೀಡೆ ಜೀವನದ ಅವಿಭಾಜ್ಯ ಭಾಗವಾಗಬೇಕು ಎಂದರು.

ತಾವು ವಿದ್ಯಾರ್ಥಿಯಾಗಿದ್ದಾಗ ಕ್ರೀಡೆಯಲ್ಲಿ ಭಾಗವಹಿಸುತ್ತಿದ್ದೆ. ಕ್ರೀಡೆಯಲ್ಲಿ ತೊಡಗಿಸಿಕೊಳ್ಳುವುದರಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನುಸಮತೋಲನದಲ್ಲಿಡಲು ಸಾಧ್ಯ. ಇಂದಿನ ದಿನಗಳಲ್ಲಿ ಮೊಬೈಲ್ ಬಳಕೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ಕ್ರೀಡೆಗೆ ಹೆಚ್ಚಿನ ಸಮಯ ಮೀಸಲಿಡಬೇಕು ಎಂದು ಹೇಳಿದರು.

ಕ್ರೀಡೆಯಲ್ಲಿ ಕೆಲವರು ಗೆಲ್ಲಬಹುದು, ಕೆಲವರು ಸೋಲಬಹುದು. ಗೆಲುವನ್ನು ಸಂತೋಷದಿಂದ ಸ್ವೀಕರಿಸುವಂತೆ ಸೋಲನ್ನೂ ಸವಾಲಾಗಿ ಸ್ವೀಕರಿಸಿ ಮುಂದಿನ ಸ್ಪರ್ಧೆಯಲ್ಲಿ ಉತ್ತಮ ಸಾಧನೆಗೆ ಪ್ರಯತ್ನಿಸಬೇಕು. ಕ್ರೀಡೆಯು ಮಾನಸಿಕವಾಗಿ ಸದೃಢರಾಗಲು ಸಹಕಾರಿಯಾಗಿದೆ ಎಂದರು.

ಜಿಲ್ಲೆಯ ಕ್ರೀಡಾಪಟುಗಳು ರಾಜ್ಯ, ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿ ಜಿಲ್ಲೆಯ ಕೀರ್ತಿ ಹೆಚ್ಚಿಸಬೇಕು ಎಂದು ಅವರು ಶುಭ ಹಾರೈಸಿದರು.

ಕ್ರೀಡಾ ಜ್ಯೋತಿ, ಒಲಿಂಪಿಕ್ ಧ್ವಜಾರೋಹಣ: ಪ್ರಾದೇಶಿಕ ಸಾರಿಗೆ ಅಧಿಕಾರಿ ವಿನಯಾ ಕಾಟೋಕರ್ ಕ್ರೀಡಾ ಜ್ಯೋತಿ ಬೆಳಗಿಸಿದರು. ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎಂ.ಎಂ. ಮೈದೂರು ಹಾಗೂ ವಿನಯಾ ಕಾಟೋಕರ್ ಒಲಿಂಪಿಕ್ ಧ್ವಜಾರೋಹಣ ನೆರವೇರಿಸಿದರು.

ಕಾರ್ಯಕ್ರಮದಲ್ಲಿಪದವಿಪೂರ್ವಶಾಲಾಶಿಕ್ಷಣಇಲಾಖೆ ಉಪನಿರ್ದೇಶಕ ಮಹದೇವಸ್ವಾಮಿ, ಉಪನ್ಯಾಸಕರು, ದೈಹಿಕ ಶಿಕ್ಷಕರು, ಪ್ರಾಂಶುಪಾಲರು, ಕ್ರೀಡಾಪಟುಗಳು ಉಪಸ್ಥಿತರಿದ್ದರು.



## ತಮ್ಮನ ಕೊಲೆಮಾಡಲು ಯತ್ನಿಸಿದ ಅಣ್ಣನಿಗೆ ಶಿಕ್ಷೆ–ದಂಡ ವಿಧಿಸಿ ತೀರ್ಪು

**ಹಾವೇರಿ:** ಜಮೀನಿನ ವಿಷಯವಾಗಿ ಗಲಾಟೆಮಾಡಿ ತಮ್ಮನ ಮೇಲೆ ಹಲ್ಲೆಮಾಡಿದ ಸವಣೂರ ತಾಲೂಕಿನ ಚಿಲ್ಲೂರಬಡ್ನಿ ಗ್ರಾಮದ ಆಪಾದಿತ ದೇವಪ್ಪ ನಾಗಪ್ಪ ಗುದಗಿ ಎಂಬಾತನಿಗೆ ಐದು ವರ್ಷ ಶಿಕ್ಷೆ ಹಾಗೂ 12 ಸಾವಿರ ದಂಡವಿಧಿಸಿ ಸೆ.21 ರಂದು ಹಾವೇರಿಯ ಒಂದನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಎನ್.ಎಂ.ರಮೇಶ ಅವರು ತೀರ್ಪು ನೀಡಿದ್ದಾರೆ.

ಆಪಾದಿತ ದೇವಪ್ಪ ಗುದಗಿ ಹಾಗೂ ಮಂಜಪ್ಪ ಗುದಗಿ ಅವರು ಅಣ್ಣತಮ್ಮಂದಿರರಾಗಬೇಕು. ಸುಮಾರು ವರ್ಷಗಳಿಂದ ಸಾಗುವಳಿ ಮಾಡಿಕೊಂಡು ಬಂದಿದ್ದ ಸರ್ಕಾರಿ ಗುಡ್ಡದ ಹತ್ತಿರದ ಜಮೀನು ಇನ್ನು ಪಟ್ಟಾ ಆಗಿರುವುದಿಲ್ಲ. ಆರೋಪಿ ಸಹಯೋಗದ ಮಂಜಪ್ಪ ನಮಗೂ ಪಾಲು ಬರುತ್ತದೆ ಹೊಲವನ್ನು ಹೊಡೆಯಬೇಡ ಎಂದು ಹೇಳಿದ್ದಕ್ಕೆ ಆಪಾದಿತನು ಒಪ್ಪಿಕೊಂಡಿದ್ದನು. ದಿ.29–05–2025 ರಂದು ಬೆಳಿಗ್ಗೆ ದೇವಪ್ಪ ಟ್ರ್ಯಾಕ್ಟರ ತೆಗೆದುಕೊಂಡು ಹೋಗಿ ಉಳಿಮೆ ಮಾಡಿಸುತ್ತಿದ್ದಾಗ, ಮಂಜಪ್ಪ ಜಮೀನಿಗೆ ಹೋಗಿ ಹೊಲವನ್ನು ಉಳುಮೆ ಮಾಡಿಸಬೇಡ, ಈ ಜಮೀನಲ್ಲಿ ನಮಗೂ ಪಾಲು ಬರುತ್ತದೆ ಅಂತಾ ಹೇಳಿದ್ದಕ್ಕೆ ಆಪಾದಿತ ದೇವಪ್ಪ ಮಂಜಪ್ಪನಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿ, ಕುಡಗೋಲಿನಿಂದ ಹಲ್ಲೆಮಾಡಿ, ಜೀವ ಬೇದರಿ–ಕೆ ಹಾಕಿದ್ದ.

ಆಪಾದಿತನ ಮೇಲೆ ಎಸಗಿದ ಆಪಾದನೆಗಳಾದ ಕಲಂ:109(1), 351(2), 352 ಬಿ.ಎನ್.ಎಸ್–2023 ರಡಿ ಆಪಾದನೆಗಳನ್ನು ಅಭಿಯೋಜನೆಯು ರುಜುವಾತು ಪಡಿಸಿದೆ.

ಈ ಕುರಿತು ಸವಣೂರ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ. ಎಂ.ಎಸ್.ದೊಡ್ಡಮನಿ ಅವರು ಪ್ರಕರಣ ದಾಖಲಿಸಿಕೊಂಡಿದ್ದರು. ನಂತರ ಪಿಎಸ್‌ಐ ರಂಗನಾಥ ಅಂತರಗಟ್ಟಿ ಅವರು ತನಿಖೆಕೈಗೊಂಡು ಆರೋಪಿತನ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದರು. ಅಭಿಯೋಜನೆ ಪರವಾಗಿ ಒಂದನೇ ಅಧಿಕ ಜಿಲ್ಲಾ ಮತ್ತು ಸತ್ರನ್ಯಾಯಾಲಯದ ಸರ್ಕಾರಿ ಅಭಿಯೋಜಕರಾದ ಶ್ರೀಮತಿ ಸರೋಜಾ ಜಿ.ಕೂಡಲಗಿಮಠ ಅವರು ವಾದ ಮಂಡಿಸಿದ್ದಾಗಿ ತಿಳಿಸಿದ್ದಾರೆ.

## ಕುಸ್ತಿ ಮತ್ತು ಕಬಡ್ಡಿ ಕ್ರೀಡೆಗಳ ಸ್ಪರ್ಧೆ

**ಹಾವೇರಿ:** ಪ್ರಸಕ್ತ 2026–27 ನೇ ಸಾಲಿನ ದಸರಾ ಹಬ್ಬದ ಪ್ರಯುಕ್ತವಾಗಿ ರಾಜ್ಯ ಮಟ್ಟದ ದಸರಾ ಕ್ರೀಡಾಕೂಟವನ್ನು ಮೈಸೂರಿನಲ್ಲಿ ಹಮ್ಮಿಕೊಳ್ಳಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಬೆಳಗಾವಿ ವಿಭಾಗ ಮಟ್ಟದ ಕಬ್ಬಡ್ಡಿಮತ್ತುಕುಸ್ತಿಕ್ರೀಡೆಗಳಿಗೆಸಂಬಂಧಿಸಿದಂತೆವಿಭಾಗಮಟ್ಟದದಸರಾ ಕ್ರೀಡಾಕೂಟವನ್ನು ದಿ. 29–09–2026 ರಂದು ಬೆಳಿಗ್ಗೆ 9 ಗಂಟೆಗೆ ಕುಸ್ತಿ ಕ್ರೀಡೆಯನ್ನು ಹಳಿಯಾಳದ ಕುಸ್ತಿ ಅಖಾಡ ಹಾಗೂ ಕಬ್ಬಡ್ಡಿ ಕ್ರೀಡೆಯನ್ನು ಶಿವಾಜಿ ಹಳಿಯಾಳ ತಾಲೂಕು ಕ್ರೀಡಾಂಗಣಲ್ಲಿ ಸಂಘಟಿಸಲಾಗುತ್ತಿದೆ.

ಈ ಕ್ರೀಡಾಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳು ದಿನಾಂಕ 29–09–2026 ರಂದು ಬೆಳಗ್ಗೆ 9ಗಂಟೆಯೊಳಗಾಗಿ ಹಳಿಯಾಳ ಕುಸ್ತಿ ಅಖಾಡದಲ್ಲಿ ನೋಂದಣಿ ಮಾಡಿಕೊಳ್ಳಬೇಕು. ಸ್ಪರ್ಧೆಗಳನ್ನು ಅದೇ ದಿನ ಬೆಳಗ್ಗೆ 9.00 ಗಂಟೆಗೆ ಪ್ರಾರಂಭಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಹರಿದೇವ ನಗರ ಹಣ್ಣುವಾಡ, ಕಾರವಾರ, ದೂ.ಸಂ. 9036955035/7899104699 ಹಾಗೂ ಅನುಶ್ರೀ ಎಚ್ ಎಸ್. ಕುಸ್ತಿ ತರಬೇತುದಾರರು, ಕ್ರೀಡಾ ವಸತಿ ನಿಲಯ, ಹಳಿಯಾಳ ದೂ.ಸಂ. 7022315684 ಕ್ಕೆ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ.

## ನಿರುದ್ಯೋಗಿಗಳಿಗೆ ವೃತ್ತಿಪರ ತರಬೇತಿ

**ಹಾವೇರಿ:** ಸಮಾಜ ಕಲ್ಯಾಣ ಇಲಾಖೆಯಿಂದ ಪಿಎಂಎಜೆಎವೈ ಯೋಜನೆಯಡಿ ಪ್ರಸಕ್ತ ಸಾಲಿಗೆ ಪರಿಶಿಷ್ಟ ಜಾತಿಯ ನಿರುದ್ಯೋಗಿ ಯುವಕ ಮತ್ತು ಯುವತಿಯರಿಗೆ ಮೈಸೂರಿನಲ್ಲಿರುವ ಭಾರತ ಸರ್ಕಾರದ ಕೇಂದ್ರೀಯ ಪೆಟ್ರೋಕೆಮಿಕಲ್ಸ್ ತಂತ್ರಜ್ಞಾನ ಸಂಸ್ಥೆಯಲ್ಲಿ ವೃತ್ತಿಪರ ತರಬೇತಿಗಳನ್ನು ಆಯೋಜಿಸಲಾಗಿದೆ.

ನೋಂದಣಿ ಪ್ರಕ್ರಿಯೆ ದಿನಾಂಕ 15–05–2026 ರಿಂದ ಅಖಕಇಖ, ಸಂಸ್ಥೆಯಲ್ಲಿ ಆರಂಭವಾಗಿದ್ದು, ಅರ್ಹ ಅಭ್ಯರ್ಥಿಗಳು ತಮ್ಮ ಮೂಲ ದಾಖಲೆಗಳಾದ ವಿದ್ಯಾರ್ಹತೆ ದಾಖಲೆ, ಜನ್ಮದಿನಾಂಕ ದಾಖಲೆ, ಗುರುಪತ್ರ(ಆಧಾರ್ ಕಾರ್ಡ್), ಇತ್ತೀಚಿನ ಜಾತಿ ಮತ್ತು ಆದಾಯ ಪ್ರಮಾಣಪತ್ರ, ಆರು ಪಾಸ್ ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರದೊಂದಿಗೆ ತರಬೇತಿಗೆ ನೋಂದಾಯಿಸಿಕೊಳ್ಳಬೇಕು.

## ಕುಡಿಯುವ ನೀರು, ಮೇವಿನ ಕೊರತೆ ಎದುರಾಗದಂತೆ ಮುನ್ನೆಚ್ಚರಿಕೆ

**ದಾವಣಗೆರೆ:** ಜಿಲ್ಲೆಯಲ್ಲಿ ಕುಡಿಯುವ ನೀರು ಮತ್ತು ಮೇವಿನ ಕೊರತೆ ಎದುರಾಗದಂತೆ ಮುನ್ನೆಚ್ಚರಿಕೆಕ್ರಮ ಕೈಗೊಳ್ಳಲಾಗಿದೆ. ನೀರು ಹಾಗೂ ವಿದ್ಯುತ್ ಪೋಲು ತಡೆಯಲು ಸಾರ್ವಜನಿಕರು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ಮನವಿ ಮಾಡಿದರು.

ಸೋಮವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಪ್ರಸ್ತುತ 18 ಗ್ರಾಮಗಳಲ್ಲಿ ಮಾತ್ರ ನೀರಿನ ಅಭಾವ ಕಂಡುಬಂದಿದ್ದು, ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಲಾಗಿದೆ. ಅಗತ್ಯವಿರುವ ಕಡೆ ಖಾಸಗಿ ಬೋರ್‌ವೆಲ್‌ಗಳನ್ನು ವಶಕ್ಕೆ ಪಡೆದು ನೀರು ಪೂರೈಸಲಾಗುತ್ತಿದೆ. ತುರ್ತು ಸಂದರ್ಭಗಳಿಗೆ ಟ್ಯಾಂಕರ್ ಮೂಲಕ ನೀರು ಪೂರೈಸಲು ಟೆಂಡರ್ ಪ್ರಕ್ರಿಯೆ ನಡೆಸಲಾಗುತ್ತಿದೆ. ಟ್ಯಾಂಕರ್‌ಗಳ ನಿರ್ವಹಣೆಯಲ್ಲಿ ಪಾರದರ್ಶಕತೆ ಕಾಪಾಡಲು ಆಪ್ ಮೂಲಕ ಮೇಲ್ವಿಚಾರಣೆ ನಡೆಸಲಾಗುವುದು ಎಂದರು.



ಚನ್ನಗಿರಿ ಹಾಗೂ ಹೊನ್ನಾಳಿ ಭಾಗದ ಕೆರೆಗಳಿಗೆ ಈಗಾಗಲೇ ನೀರು ತುಂಬಿಸಲಾಗಿದ್ದು, ರಾಜನಹಳ್ಳಿ ಬ್ಯಾರೇಜ್ ಮೂಲಕ ದಾವಣಗೆರೆ ನಗರಕ್ಕೆ ಮುಂದಿನ90ರಿಂದ120ದಿನಗಳಿಗೆಸಾಕಾಗುವಷ್ಟು ಕುಡಿಯುವ ನೀರು ಲಭ್ಯವಿದೆ ಎಂದು ತಿಳಿಸಿದರು. ಜಿಲ್ಲೆಯಲ್ಲಿ28ವಾರಗಳಿಗೆಸಾಕಾಗುವಷ್ಟುಮೇವಿನ ಸಂಗ್ರಹವಿದ್ದು, ಅಗತ್ಯವಿರುವ ಕಡೆ ತಹಶೀಲ್ದಾರ್ ನೇತೃತ್ವದಲ್ಲಿ ಮೇವು ಬ್ಯಾಂಕ್ ತೆರೆಯಲು ಕ್ರಮ ಕೈಗೊಳ್ಳಲಾಗಿದೆ. ಭದ್ರಾ ನೀರನ್ನು ಕೆರೆಗಳ ಭರ್ತಿ ಹಾಗೂ ಜಾನುವಾರುಗಳ ಕುಡಿಯುವ ನೀರಿಗೆ ಬಳಸಲು ಆದ್ಯತೆ ನೀಡಲಾಗಿದ್ದು, ಹೆಚ್ಚು ನೀರು ಬೇಡುವ ಭತ್ತದ ಬೆಳೆಗೆ ನೀರು ಬಿಡುವ ನಿರ್ಧಾರ ಕೈಗೊಂಡಿಲ್ಲ ಎಂದರು.

ಬೇಸಿಗೆಯಲ್ಲಿ ವಿದ್ಯುತ್ ಕೊರತೆ ತಪ್ಪಿಸಲು ಸರ್ಕಾರಿ ಕಚೇರಿಗಳಲ್ಲಿ ಸೌರಶಕ್ತಿ ಅಳವಡಿಕೆಗೆ ಕ್ರಮ ಕೈಗೊಳ್ಳಲಾಗಿದೆ. ಜಿಲ್ಲಾಧಿಕಾರಿ ಕಚೇರಿಯಲ್ಲಿ ಈಗಾಗಲೇ 80 ಕಿಲೋವ್ಯಾಟ್ ಸೌರಶಕ್ತಿ ಅಳವಡಿಸಲಾಗಿದ್ದು, ಹೆಚ್ಚುವರಿ ಸಾಮರ್ಥ್ಯ ಅಳವಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ನೀರು ಮತ್ತು ವಿದ್ಯುತ್ ಅನ್ನು ಅಗತ್ಯಕ್ಕೆ ತಕ್ಕಂತೆ ಮಿತವಾಗಿ ಬಳಸುವಂತೆ ಸಾರ್ವಜನಿಕರಿಗೆ ಮನವಿ ಮಾಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಮಮತಾ ಹೊಸಗೌಡರ್, ದೂಡಾ ಆಯುಕ್ತ ರೇಣುಕಾ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

## ದೇವರಬೆಳಕೆರೆ ಹಳ್ಳಕ್ಕೆ ತಕ್ಷಣ ನೀರು ಹರಿಸಲು ಬಿ.ಪಿ. ಹರೀಶ್ ಆಗ್ರಹ

ಹರಿಹರ: ಭದ್ರಾ ಅಣೆಕಟ್ಟಿನಿಂದ ಕಾಲುವೆಗಳಿಗೆ ನೀರು ಹರಿಸಲಾಗುತ್ತಿದ್ದರೂ ಮಲೆಬೆನ್ನೂರು ಹಾಗೂ ಡ್ರೈ ಲ್ಯಾಂಡ್ ಭಾಗದ ಗ್ರಾಮಗಳಿಗೆ ಸಮರ್ಪಕವಾಗಿ ನೀರು ತಲುಪುತ್ತಿಲ್ಲ ಎಂದು ಶಾಸಕ ಬಿ.ಪಿ. ಹರೀಶ್ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರು.

ಬೆಂಗಳೂರಿನಲ್ಲಿನಡೆಯುತ್ತಿರುವವಿಧಾನಸಭೆಯ ವಿಶೇಷ ಅಧಿವೇಶನದಲ್ಲಿ ಪಾಲ್ಗೊಂಡಿರುವ ದಾವಣಗೆರೆ ಜಿಲ್ಲಾಧಿಕಾರಿಗಳನ್ನು ದೂರವಾಣಿ ಮೂಲಕಸಂಪರ್ಕಿಸಿದಶಾಸಕರು,ದೇವರಬೆಳಕೆರೆ ಪಿಕಪ್ ಡ್ಯಾಂನಿಂದ ದೇವರಬೆಳಕೆರೆ ಹಳ್ಳಕ್ಕೆ ಅಗತ್ಯ ಪ್ರಮಾಣದ ನೀರು ಹರಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತುರ್ತು ಸೂಚನೆ ನೀಡಬೇಕು ಎಂದು ಮನವಿ ಮಾಡಿದರು.



ನೀರು ಹರಿಸದಿದ್ದರೆ ಹಳ್ಳದ ತೀರದ ಹಲವು ಗ್ರಾಮಗಳ ಎಲೆಬಳ್ಳಿ ಹಾಗೂ ಅಡಿಕೆ ತೋಟಗಳು ಒಣಗಿ ಹಾನಿಯಾಗುವ ಸಾಧ್ಯತೆ ಇದೆ. ಇದರಿಂದ ರೈತರ ಕೃಷಿ ಚಟುವಟಿಕೆ ಹಾಗೂ ಜೀವನೋಪಾಯಕ್ಕೆ ತೀವ್ರ ತೊಂದರೆಯಾಗಲಿದೆ ಎಂದು ಅವರು ತಿಳಿಸಿದರು.

ಮಲೆಬೆನ್ನೂರು ಹಾಗೂ ಡ್ರೈ ಲ್ಯಾಂಡ್ ಭಾಗದ ರೈತರಿಗೆ ಸಮರ್ಪಕವಾಗಿ ನೀರು ತಲುಪುವಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ಶಾಸಕರು ಒತ್ತಾಯಿಸಿದರು.

## ಗದಗ, ರೋಣ, ಮುಂಡರಗಿ ತಾಲೂಕುಗಳನ್ನು ಬರಪೀಡಿತವೆಂದು ಘೋಷಿಸಿ: ಮುಧೋಳ

**ರೋಣ:** ಮಳೆ ಕೊರತೆಯಿಂದ ನಲುಗುತ್ತಿರುವ ರೋಣ, ಮುಂಡರಗಿ ಹಾಗೂ ಗದಗ ತಾಲೂಕುಗಳನ್ನು ಶೀಘ್ರ ಬರಪೀಡಿತ ಪಟ್ಟಿಗೆ ಸೇರ್ಪಡೆ ಮಾಡಬೇಕು. ಇಲ್ಲದಿದ್ದರೆ ಜೆಡಿಎಸ್ ಪಕ್ಷದಿಂದ ಜಿಲ್ಲಾದ್ಯಂತ ಪ್ರತಿಭಟನೆ ನಡೆಸಲಾಗುವುದು ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಮಕ್ತುಂಸಾಬ್ ಮುಧೋಳ ಎಚ್ಚರಿಕೆ ನೀಡಿದರು.



ಪಟ್ಟಣದ ಲೋಕೋಪಯೋಗಿ ಇಲಾಖೆ ಪ್ರವಾಸಿ ಮಂದಿರದಲ್ಲಿ ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಇಡೀ ಜಿಲ್ಲೆಯಲ್ಲಿ ಎಲ್ಲೂ ವಾಡಿಕೆಯಷ್ಟು ಮಳೆ ಸುರಿದಿಲ್ಲ. ಜಿಲ್ಲಾ ಉಸ್ತುವಾರಿ ಸಚಿವರಾದ ಬಸವರಾಜರಾಯರಡ್ಡಿಯವರುಅಧಿಕಾರಿಗಳ ಜತೆಗೆ ಪ್ರತಿ ತಾಲೂಕಿನ ಜಮೀನುಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಆದರೂ ಮೂರು ತಾಲೂಕುಗಳನ್ನು ಬಟ ಪಟ್ಟಿಯಿಂದ ಬಿಟ್ಟಿದ್ದು ಸರಿಯಲ್ಲ ಎಂದರು.

ಕೃಷಿ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಸರ್ಕಾರಕ್ಕೆ ಸಮರ್ಪಕ ಬೆಳೆ ಹಾನಿ ವರದಿ ಸಲ್ಲಿಸದಿರುವುದು ಮೂರೂ ತಾಲೂಕುಗಳು ಬರ ಪಟ್ಟಿಯಿಂದ ಹೊರಗುಳಿಯಲು ಪ್ರಮುಖ ಕಾರಣವಾಗಿದೆ ಎಂದು ಆರೋಪಿಸಿದರು. ಸಂಗಪ್ಪ ಯಲಬುಣಚಿ, ಬಾದ್‌ಷಹಾ ಭಾಗವಾನ ಇತರರು ಇದ್ದರು.

## ಎಸ್‌ಐಆರ್ ಜಾಗೃತಿ ಅಭಿಯಾನ

ಹಾವೇರಿ: ತಾಲೂಕಿನ ದೇವಗಿರಿ ಗ್ರಾಪಂನಲ್ಲಿ ಪ್ರಗತಿಯಲ್ಲಿರುವ ಕೆರೆ ಅಭಿವೃದ್ಧಿ ಕಾಮಗಾರಿ ಸ್ಥಳದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ–2026 ಕುರಿತು ಜಾಗೃತಿ ಕಾರ್ಯಕ್ರಮ ಆಯೋಜಿಸಿ, ಕಾರ್ಮಿಕರಿಗೆ ಅರಿವು ಮೂಡಿಲಾಯಿತು. ಸಹಾಯಕ ನಿರ್ದೇಶಕ ಮೌಲಾಸಾಬ್ ಎಲವಗಿ ಅವರು ಎಸ್‌ಐಆರ್ ಅಭಿಯಾನದ ಕುರಿತು ಮಾಹಿತಿ ನೀಡಿದರು. ಈ ವೇಳೆ ಪಿಡಿಓ, ಟಿಐಇಸಿ ಸೇರಿದಂತೆ ಪಂಚಾಯತ ಸಿಬ್ಬಂದಿಗಳು, ಕಾಯಕ ಬಂಧಯಗಳು ಇದ್ದರು.

ಸಮಾಲೋಚನೆ ಸುದ್ದಿ
SAMALOCHANE RANEBENNURSUDDI
Kannada Daily Morning

# ರಕ್ತದಾನಕ್ಕೆ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಮುಂದಾಗಬೇಕು: ಡಾ. ಈಶ್ವರ ಹಸಬಿ

**ಹುಬ್ಬಳ್ಳಿ:** ಥಲಸ್ಸೆಮಿಯಾ ಹಾಗೂ ಹಿಮೋಫೀಲಿಯಾ ಪೀಡಿತ ಮಕ್ಕಳಿಗಾಗಿ ಕೆಎಂಸಿಆರ್‌ಐ ಆಸ್ಪತ್ರೆಯ ರಕ್ತಕೇಂದ್ರದಲ್ಲಿ ವಿಶೇಷ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು. ಶಿಬಿರದಲ್ಲಿ ಹಲವು ರಕ್ತದಾನಿಗಳು ಸ್ವಯಂಪ್ರೇರಿತರಾಗಿ ರಕ್ತದಾನ ಮಾಡಿದರು.

ಕಾರ್ಯಕ್ರಮವನ್ನು ಥಲಸ್ಸೆಮಿಯಾ ಕಾಯಿಲೆಯಿಂದ ಸುಮಾರು ಒಂಬತ್ತು ವರ್ಷಗಳಿಂದ ಬಳಲುತ್ತಿರುವ ಕುಮಾರಿ ಸೃಷ್ಟಿ ಸಣ್ಣಗೌಡರ ಅವರಿಂದ ದೀಪ ಬೆಳಗಿಸುವ ಮೂಲಕ ಉದ್ಘಾಟಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಕೆಎಂಸಿಆರ್‌ಐ ವೈದ್ಯಕೀಯ ಅಧೀಕ್ಷಕ ಡಾ. ಈಶ್ವರ ಹಸಬಿ ಮಾತನಾಡಿ, ಥಲಸ್ಸೆಮಿಯಾ ಸೇರಿದಂತೆ ವಿವಿಧ ಕಾಯಿಲೆಗಳಿಂದ ಬಳಲುತ್ತಿರುವ ಮಕ್ಕಳಿಗೆ ನಿಯಮಿತವಾಗಿ ರಕ್ತದ ಅವಶ್ಯಕತೆ ಇರುತ್ತದೆ. ಆದ್ದರಿಂದ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಸ್ವಯಂಪ್ರೇರಿತರಾಗಿ ರಕ್ತದಾನಕ್ಕೆ ಮುಂದಾಗಬೇಕು ಎಂದು ಮನವಿ ಮಾಡಿದರು.

ರಕ್ತನಿಧಿಯ ವೈದ್ಯಾಧಿಕಾರಿ ಡಾ. ಕವಿತಾ ಮಾತನಾಡಿ, ಕೆಎಂಸಿಆರ್‌ಐ ಆಸ್ಪತ್ರೆಯಲ್ಲಿ 70ಕ್ಕೂ ಅಧಿಕ ಮಕ್ಕಳು ಥಲಸ್ಸೆಮಿಯಾ ಕಾಯಿಲೆಯಿಂದ ಬಳಲುತ್ತಿದ್ದು, ಅವರು ಪ್ರತಿ ತಿಂಗಳು ಚಿಕಿತ್ಸೆ ಪಡೆಯುತ್ತಿದ್ದಾರೆ. ಇಂತಹ ಮಕ್ಕಳಿಗೆ ಅಗತ್ಯವಿರುವ ರಕ್ತವನ್ನು ಆಸ್ಪತ್ರೆಯ ವತಿಯಿಂದ ವ್ಯವಸ್ಥೆ ಮಾಡಲಾಗುತ್ತಿದೆ. ಇನ್ನೂ ಅನೇಕ ರೋಗಿಗಳಿಗೆ ರಕ್ತದ ಅವಶ್ಯಕತೆ ಇರುವುದರಿಂದ ಸಂಘ–ಸಂಸ್ಥೆಗಳು ಸ್ವಯಂಪ್ರೇರಿತವಾಗಿ ರಕ್ತದಾನ ಶಿಬಿರಗಳನ್ನು ಆಯೋಜಿಸಿದರೆ ರೋಗಿಗಳಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ತಿಳಿಸಿದರು.




ರಕ್ತದಾನಿಗಳಿಗೆ ಕೆಎಂಸಿಆರ್‌ಐ ರಕ್ತಕೇಂದ್ರದಲ್ಲಿ ಅಗತ್ಯವಿರುವ ಎಲ್ಲ ರೀತಿಯ ಸಹಕಾರ ನೀಡಲಾಗುವುದು ಎಂದ ಅವರು, ಅರ್ಹರು ರಕ್ತದಾನ ಮಾಡುವ ಮೂಲಕ ಜೀವ ಉಳಿಸುವ ಮಹತ್ವದ ಕಾರ್ಯದಲ್ಲಿ ಕೈಜೋಡಿಸಬೇಕು ಎಂದು ಹೇಳಿದರು.

ಶ್ರಮಜೀವಿ ಆಟೋರಿಕ್ಷಾ ಚಾಲಕರ ಸಂಘದ ಅಧ್ಯಕ್ಷ ಚಿದಾನಂದ ಸವದತ್ತಿ ಮಾತನಾಡಿ, ಸಂಘದ ವತಿಯಿಂದ ಈ ಹಿಂದೆಯೂ ಹಲವು ಬಾರಿ ರಕ್ತದಾನ ಶಿಬಿರಗಳನ್ನು ಆಯೋಜಿಸಲಾಗಿದೆ. ಆಟೋ ಚಾಲಕರು ಹಾಗೂ ಅವರ ಕುಟುಂಬದ ಸದಸ್ಯರಿಗೆ ಆರೋಗ್ಯ ತಪಾಸಣಾ ಕಾರ್ಯಕ್ರಮಗಳನ್ನು ಸಹ ನಡೆಸಿಕೊಂಡು ಬರಲಾಗುತ್ತಿದೆ. ಈ ಅರ್ಥಪೂರ್ಣ ಕಾರ್ಯಕ್ರಮಕ್ಕೆ ಆಹ್ವಾನಿಸಿರುವುದು ಇನ್ನಷ್ಟು ಸಮಾಜಸೇವಾ ಕಾರ್ಯಗಳನ್ನು ಕೈಗೊಳ್ಳಲು ಪ್ರೇರಣೆ ನೀಡಿದೆ. ಮುಂದಿನ ದಿನಗಳಲ್ಲಿ ಸಂಘದ ವತಿಯಿಂದ ಹೆಚ್ಚಿನ ಸಂಖ್ಯೆಯಲ್ಲಿ ರಕ್ತದಾನ ಶಿಬಿರಗಳನ್ನು ಆಯೋಜಿಸಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಘದ ಸದಸ್ಯರಾದ ಶಬ್ಬೀರ್ ಬಾಗೇವಾಡಿ, ಶಾಬುದ್ದಿನ್ ಧಾರವಾಡ ಸೇರಿದಂತೆ ಹಲವು ಆಟೋ ಚಾಲಕರು ರಕ್ತದಾನ ಮಾಡಿದರು.

ಹುಬ್ಬಳ್ಳಿ ಆಯುರ್ವೇದ ಆಸ್ಪತ್ರೆಯ ಮುಖ್ಯ ವೈದ್ಯರಾದ ಡಾ. ಸಿದ್ದನಗೌಡ ಪಾಟೀಲ ಅವರು ಸಹ ಸ್ವಯಂಪ್ರೇರಿತರಾಗಿ ರಕ್ತದಾನ ಮಾಡಿದರು. ವೈದ್ಯರ ಈ ಸೇವಾ ಮನೋಭಾವಕ್ಕೆ ರಕ್ತದಾನಿಗಳು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಡಾ. ಅನಿಲಕುಮಾರ, ಶ್ರೀ ಜನಕಲ್ಯಾಣ ಶಿಕ್ಷಣ ಹಾಗೂ ಆರೋಗ್ಯ ಸೇವಾ ಸಂಸ್ಥೆಯ ಆನಂದ ಬಡಿಗೇರ, ಹರೀಶ್ ಕುಮಾರ್ ಆರ್. ಸೇರಿದಂತೆ ಹಲವರು ಉಪಸ್ಥಿತರಿದ್ದರು. ಶ್ರಮಜೀವಿ ಆಟೋರಿಕ್ಷಾ ಚಾಲಕರ ಸಂಘದ ಪ್ರಧಾನ ಕಾರ್ಯದರ್ಶಿ ಪುಂಡಲಿಕ ಬಡಿಗೇರ ಕಾರ್ಯಕ್ರಮ ನಿರೂಪಿಸಿದರು.

ಶಿಬಿರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ರಕ್ತದಾನಿಗಳು ಭಾಗವಹಿಸಿ ರಕ್ತದಾನ ಮಾಡುವ ಮೂಲಕ ಥಲಸ್ಸೆಮಿಯಾ ಹಾಗೂ ಹಿಮೋಫೀಲಿಯಾ ಪೀಡಿತ ಮಕ್ಕಳಿಗೆ ನೆರವಾದರು ಎಂದು ವಿಠ್ಠಲ್ ಬಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಯಿ ಕಚ್ಚಿದರೆ ನಿರ್ಲಕ್ಷ್ಯ ಬೇಡ; ಜೀವ ಉಳಿಸುವ ಲಸಿಕೆ ಮರೆಯದಿರಿ: ಪಶು ವೈದ್ಯಾಧಿಕಾರಿ ಡಾ. ಎಲ್.ಎಸ್. ಗೌರಿ

**ನರೇಗಲ್ಲ :** ನಾಯಿ ಅಥವಾ ಇತರೆ ಪ್ರಾಣಿಗಳು ಕಚ್ಚಿದ ಸಂದರ್ಭದಲ್ಲಿ ನಿರ್ಲಕ್ಷ್ಯ ವಹಿಸದೆ ತಕ್ಷಣ ಸೂಕ್ತ ವೈದ್ಯಕೀಯ ಚಿಕಿತ್ಸೆ ಪಡೆಯಬೇಕು. ರೇಬಿಸ್ ಮಾರಕ ರೋಗವಾಗಿದ್ದು, ಮುನ್ನೆಚ್ಚರಿಕೆ ಹಾಗೂ ಸಮಯಕ್ಕೆ ಸರಿಯಾಗಿ ಲಸಿಕೆ ಪಡೆಯುವ ಮೂಲಕ ರೋಗವನ್ನು ತಡೆಗಟ್ಟಬಹುದು ಎಂದು ಪಶು ವೈದ್ಯಾಧಿಕಾರಿ ಡಾ. ಎಲ್.ಎಸ್. ಗೌರಿ ಹೇಳಿದರು.

ಕರ್ನಾಟಕ ಸರ್ಕಾರ, ಜಿಲ್ಲಾ ಪಂಚಾಯತ್ ಗದಗ ಹಾಗೂ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಗದಗ ಇವರ ಸಹಯೋಗದಲ್ಲಿ ನರೇಗಲ್ಲದ ಪಶು ಚಿಕಿತ್ಸಾ ಕೇಂದ್ರದ ವತಿಯಿಂದ ಸಮೀಪದ ಜಕ್ಕಲಿ ಗ್ರಾಮದ ಶ್ರೀ ಅಂದಾನಪ್ಪ ಜ್ಞಾನಪ್ಪ ದೊಡ್ಡಮೇಟಿ ಸರ್ಕಾರಿ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದ ರೇಬಿಸ್ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ರೇಬಿಸ್ ಸೋಂಕಿತ ನಾಯಿ, ಬೆಕ್ಕು, ನರಿ, ತೋಳ ಹಾಗೂ ಮುಂಗುಸಿ ಸೇರಿದಂತೆ ಸೋಂಕಿತ ಪ್ರಾಣಿಗಳ ಕಚ್ಚುವಿಕೆ ಅಥವಾ ತರಚುವಿಕೆಯಿಂದ ಮನುಷ್ಯರಿಗೆ ಹರಡಬಹುದು. ಪ್ರಾಣಿಗಳ ಲಾಲಾರಸದ ಮೂಲಕ ವೈರಸ್ ದೇಹವನ್ನು ಪ್ರವೇಶಿಸುವುದರಿಂದ ಪ್ರಾಣಿ ಕಚ್ಚಿದ ಅಥವಾ ತರಚಿದ ಸಂದರ್ಭದಲ್ಲಿ ಗಾಯವನ್ನು ನಿರ್ಲಕ್ಷಿಸಬಾರದು ಎಂದು ತಿಳಿಸಿದರು.

ಪ್ರಾಣಿಗಳಲ್ಲಿ ನಡವಳಿಕೆಯಲ್ಲಿ ಹಠಾತ್ ಬದಲಾವಣೆ, ಆಹಾರ ಸೇವಿಸದಿರುವುದು, ಅತಿಯಾಗಿ ಜೊಲ್ಲು ಸುರಿಸುವುದು ಹಾಗೂ ಪಾರ್ಶ್ವವಾಯು ಸೇರಿದಂತೆ ವಿವಿಧ ಲಕ್ಷಣಗಳು ಕಾಣಿಸಿಕೊಳ್ಳಬಹುದು. ಮನುಷ್ಯರಲ್ಲಿ ಜ್ವರ, ತಲೆನೋವು, ಕಚ್ಚಿದ ಸ್ಥಳದಲ್ಲಿ ಜುಮ್ಮೆನಿಸುವಿಕೆ, ನೀರು ಹಾಗೂ ಗಾಳಿಗೆ ಹೆದರುವಿಕೆ ಮುಂತಾದ ಲಕ್ಷಣಗಳು ಕಂಡುಬರಬಹುದು ಎಂದು ವಿವರಿಸಿದರು.

ನಾಯಿ ಅಥವಾ ಇತರೆ ಪ್ರಾಣಿಗಳು ಕಚ್ಚಿದ ತಕ್ಷಣ ಗಾಯವನ್ನು ಕನಿಷ್ಠ 15 ನಿಮಿಷಗಳ ಕಾಲ ಸಾಬೂನು ಹಾಗೂ ಹರಿಯುವ ನೀರಿನಿಂದ ಚೆನ್ನಾಗಿ ತೊಳೆಯಬೇಕು. ಗಾಯಕ್ಕೆ ಯಾವುದೇ ದೇಶಿ ಔಷಧಿ, ಮಣ್ಣು, ಎಣ್ಣೆ ಅಥವಾ ಇತರೆ ಪದಾರ್ಥಗಳನ್ನು ಹಚ್ಚಬಾರದು. ಕೂಡಲೇ ವೈದ್ಯರನ್ನು ಸಂಪರ್ಕಿಸಿ ಅಗತ್ಯವಿರುವ ರೇಬಿಸ್ ಲಸಿಕೆ ಹಾಗೂ ವೈದ್ಯಕೀಯ ಚಿಕಿತ್ಸೆ ಪಡೆಯಬೇಕು ಎಂದು ಸಲಹೆ ನೀಡಿದರು.

ಸಾಕು ನಾಯಿಗಳು ಹಾಗೂ ಬೆಕ್ಕುಗಳಿಗೆ ನಿಯಮಿತವಾಗಿ ರೇಬಿಸ್ ಲಸಿಕೆ ಹಾಕಿಸುವುದು ಅತ್ಯಗತ್ಯ. ಮಕ್ಕಳು ಬೀದಿ ನಾಯಿಗಳನ್ನು ಕೆಣಕುವುದು, ಅವುಗಳೊಂದಿಗೆ ಆಟವಾಡುವುದು ಅಥವಾ ಪರಿಚಯವಿಲ್ಲದ ಪ್ರಾಣಿಗಳನ್ನು ಮುಟ್ಟುವುದನ್ನು ತಪ್ಪಿಸಬೇಕು. ಪ್ರಾಣಿಗಳೊಂದಿಗೆ ಸುರಕ್ಷಿತ ಅಂತರ ಕಾಯ್ದುಕೊಳ್ಳುವ ಕುರಿತು ಮಕ್ಕಳಲ್ಲಿ ಅರಿವು ಮೂಡಿಸುವುದು ಅಗತ್ಯ ಎಂದರು.

ರೇಬಿಸ್‌ನ ಲಕ್ಷಣಗಳು ಕಾಣಿಸಿಕೊಂಡ ಬಳಿಕ ಚಿಕಿತ್ಸೆ ಕಷ್ಟಸಾಧ್ಯವಾಗಿರುವುದರಿಂದ, ಪ್ರಾಣಿ ಕಚ್ಚಿದ ಕೂಡಲೇ ವೈದ್ಯಕೀಯ ಸಲಹೆ ಪಡೆದು ಅಗತ್ಯ ಲಸಿಕೆ ಪಡೆಯುವುದೇ ರೋಗ ತಡೆಗಟ್ಟುವ ಪ್ರಮುಖ ಮಾರ್ಗವಾಗಿದೆ. ರೇಬಿಸ್ ನಿಯಂತ್ರಣಕ್ಕೆ ಜನಜಾಗೃತಿ, ಪ್ರಾಣಿಗಳ ಲಸಿಕಾಕರಣ ಹಾಗೂ ಆರೋಗ್ಯ ಮತ್ತು ಪಶುಸಂಗೋಪನಾ ಇಲಾಖೆಗಳ ಸಮನ್ವಯ ಅಗತ್ಯ ಎಂದು ಡಾ. ಗೌರಿ ಹೇಳಿದರು.

ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯ ಶಿಕ್ಷಕಿ ಶಾರದಾ ಎಂ., ಶಿಕ್ಷಕರಾದ ವಿ.ವಿ. ಅಣ್ಣಿಗೇರಿ, ಆರ್.ಡಿ. ಬಡಿಗೇರ ಸೇರಿದಂತೆ ಶಿಕ್ಷಕರ ವೃಂದ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



## ಶಿಕ್ಷಣದ ಜತೆಗೆ ಸಂಸ್ಕಾರವೂ ಮಕ್ಕಳ ಬದುಕಿನ ಆಸ್ತಿ: ಮುಪ್ಪಿನ ಬಸವಲಿಂಗ ಸ್ವಾಮೀಜಿ ಸಲಹೆ

**ನರೇಗಲ್ಲ:** "ಇಂದಿನ ವಿದ್ಯಾರ್ಥಿಗಳೇ ನಾಳಿನ ಗ್ರಾಮದ ಹಾಗೂ ಸಮಾಜದ ಜವಾಬ್ದಾರಿಯುತ ನಾಗರಿಕರು. ಮಕ್ಕಳಲ್ಲಿ ಸತ್ಯ, ನೀತಿ, ಪ್ರಾಮಾಣಿಕತೆ, ಗುರು–ಹಿರಿಯರಿಗೆ ಗೌರವ ಹಾಗೂ ಕೃತಜ್ಞತಾ ಭಾವ ಬೆಳೆಸುವುದು ಅತ್ಯಗತ್ಯ" ಎಂದು ಹಾಲಕೆರೆ–ಗಂಜಿಹಾಳ ಅನ್ನದಾನೇಶ್ವರ ಸಂಸ್ಥಾನ ಮಠದ ಜಗದ್ಗುರು ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಹೇಳಿದರು.

ಸಮೀಪದ ಹಾಲಕೆರೆ ಗ್ರಾಮದ ಆರ್‌ಎಂಎಸ್‌ಎ ಪ್ರೌಢಶಾಲೆ, ಸರ್ಕಾರಿ ಕನ್ನಡ ಗಂಡುಮಕ್ಕಳ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಸರ್ಕಾರಿ ಕನ್ನಡ ಹೆಣ್ಣುಮಕ್ಕಳ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಜಿಲ್ಲಾ ಪಂಚಾಯತ ಗದಗ, ಶಾಲಾ ಶಿಕ್ಷಣ ಇಲಾಖೆ ಹಾಗೂ ಅನ್ನದಾನೇಶ್ವರ ಸಂಸ್ಥಾನ ಮಠದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಮೌಲ್ಯ ಶಿಕ್ಷಣ ಅನುಷ್ಠಾನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳಲ್ಲಿ ಒಳ್ಳೆಯತನ, ಗುರು–ಹಿರಿಯರಿಗೆ ಗೌರವ, ಕಲಿಸಿದ ಗುರುಗಳ ಬಗ್ಗೆ ಕೃತಜ್ಞತೆ ಹಾಗೂ ಸಮಾಜದ ಋಣ ತೀರಿಸುವ ಮನೋಭಾವ ಬೆಳೆಸಿದಾಗ ಗ್ರಾಮದಲ್ಲಿ ಉತ್ತಮ ಹಾಗೂ ಸುಸಂಸ್ಕೃತ ವಾತಾವರಣ ನಿರ್ಮಾಣವಾಗುತ್ತದೆ. ಶಿಕ್ಷಣದ ಜತೆಗೆ ಮಕ್ಕಳಲ್ಲಿ ಸಂಸ್ಕಾರ ಮತ್ತು ಜೀವನ ಮೌಲ್ಯಗಳನ್ನು ಬೆಳೆಸುವುದು ಕುಟುಂಬ, ಶಾಲೆ ಹಾಗೂ ಸಮಾಜದ ಎಲ್ಲರ ಜವಾಬ್ದಾರಿಯಾಗಿದೆ ಎಂದರು.

ಮೌಲ್ಯ ಶಿಕ್ಷಣಕ್ಕೆ ಮಾತ್ರ ಸೀಮಿತವಾಗದೆ, ಮೂರು ಶಾಲೆಗಳ ಮಕ್ಕಳಿಗೆ ಅಗತ್ಯವಿರುವ ಶೈಕ್ಷಣಿಕ ಸೌಲಭ್ಯಗಳನ್ನು ಒದಗಿಸಲು ಮಠ ಮುಂದೆಯೂ ಸಹಕರಿಸಲಿದೆ. ಗ್ರಾಮದ ಹಿರಿಯರು ಹಾಗೂ ಶಿಕ್ಷಕರ ಸಹಕಾರದೊಂದಿಗೆ ಮೂರು ಶಾಲೆಗಳನ್ನು ಆದರ್ಶ ಶಾಲೆಗಳನ್ನಾಗಿ ರೂಪಿಸುವುದು ಮಠದ ಉದ್ದೇಶವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, ಶಾಲೆಗಳ ಅಭಿವೃದ್ಧಿ ಹಾಗೂ ಮಕ್ಕಳಲ್ಲಿ ಸಂಸ್ಕಾರ ಮತ್ತು ಮೌಲ್ಯಗಳನ್ನು ಬೆಳೆಸುವ ಕುರಿತು ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಹೊಂದಿರುವ ಕಾಳಜಿ ಮತ್ತು ದೂರದೃಷ್ಟಿ ಶ್ಲಾಘನೀಯ. ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಮಠದ ಮಾರ್ಗದರ್ಶನ ಹಾಗೂ ಸಹಕಾರ ಶಿಕ್ಷಣ ಇಲಾಖೆಗೆ ಮತ್ತಷ್ಟು ಬಲ ನೀಡಲಿದೆ ಎಂದರು.

ಈ ಸಂದರ್ಭದಲ್ಲಿ ಮೂರು ಶಾಲೆಗಳಿಗೂ ಮಠದ ವತಿಯಿಂದ ಮೌಲ್ಯ ಶಿಕ್ಷಣಕ್ಕೆ ಸಂಬಂಧಿಸಿದ ಪುಸ್ತಕಗಳನ್ನು ವಿತರಿಸಲಾಯಿತು. 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಪ್ರೌಢಶಾಲೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಶಾಲಾ ಮಕ್ಕಳಿಂದ ಮೌಲ್ಯ ಶಿಕ್ಷಣಕ್ಕೆ ಸಂಬಂಧಿಸಿದ ವಿವಿಧ ಚಟುವಟಿಕೆಗಳು ಹಾಗೂ ಪ್ರಾತ್ಯಕ್ಷಿಕೆಗಳು ಪ್ರದರ್ಶನಗೊಂಡವು.

ಕಾರ್ಯಕ್ರಮದ ವೇದಿಕೆಯಲ್ಲಿ ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣಾ ಸಮಿತಿಯ ಅಧ್ಯಕ್ಷರಾದ ಅಂದಪ್ಪ ಕುರಿ, ದೇವೇಂದ್ರಪ್ಪ ಕಡೆಮನಿ, ಮುಖ್ಯೋಪಾಧ್ಯಾಯರಾದ ಎಸ್.ಬಿ. ಸಂಕಣ್ಣವರ, ಬಿ.ಆಯ್. ಹಿರೇಹಾಳ ಹಾಗೂ ಸಾವಿತ್ರಮ್ಮ ಚುಂಚಾ, ಸದಸ್ಯೆ ಅನ್ನಪೂರ್ಣ ಬಾರಡ್ಡಿ ಉಪಸ್ಥಿತರಿದ್ದರು.

ಗ್ರಾಮದ ಹಿರಿಯರಾದ ಅಂದಾನಗೌಡ ಪಾಟೀಲ, ಎ.ಸಿ. ಪಾಟೀಲ, ಗಿರೀಶಗೌಡ ಪಾಟೀಲ, ವೀರಣ್ಣ ಹಳ್ಳಿ, ಶರಣಪ್ಪ ಬೆಟಗೇರಿ, ಅಶೋಕ ಮಾಳಗೌಡ, ಬಸವರಾಜ ಹೊನವಾಡ, ಶರಣಪ್ಪ ಕರಮುಡಿ, ಮಂಜುನಾಥ ಬುರಡಿ, ಮಹೇಶ ಕುರಿ, ಚಂದ್ರು ಮುಂದಿನಮನಿ, ಬಿ.ಸಿ. ಮೇಟಿ, ಈಶ್ವರಯ್ಯ ರುದ್ರಾಕ್ಷಿಮಠ, ರಮೇಶ ಬೈರಗೊಂಡ, ರಮೇಶ ಬನ್ನಿಗಿಡದ ಸೇರಿದಂತೆ ಎಸ್‌ಡಿಎಂಸಿ ಸದಸ್ಯರು ಹಾಗೂ ಶಿಕ್ಷಕ ವೃಂದದವರು ಪಾಲ್ಗೊಂಡಿದ್ದರು.

ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ, ಅನ್ನದಾನ ವಿಜಯ ಬಾಲಕರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎಂ.ಬಿ. ಸಜ್ಜನರ, ಶಿಕ್ಷಕ ಎಸ್.ಬಿ. ಬೂದಿಹಾಳ, ಉಪನ್ಯಾಸಕ ಎಫ್.ಎನ್. ಹುಡೇದ, ಸಿಆರ್‌ಪಿ ಶಿವು ಮುತ್ತಣ್ಣವರ ಸೇರಿದಂತೆ ಹಲವರು ಭಾಗವಹಿಸಿದ್ದರು. ಜಗದೀಶ್ ಕಾರ್ಯಕ್ರಮ ನಿರೂಪಿಸಿದರು. ಕಾಲವಾಡ ವಂದಿಸಿದರು.



## ಅರಸನಾಳದಲ್ಲಿ ಸಂಭ್ರಮದ ಶ್ರೀ ಷಣ್ಮುಖೇಶ್ವರ ರಥೋತ್ಸವ

**ಮುದ್ದೇಬಿಹಾಳ:** ತಾಲ್ಲೂಕಿನ ಅರಸನಾಳ ಗ್ರಾಮದ ಇತಿಹಾಸ ಪ್ರಸಿದ್ಧ ಶ್ರೀ ಷಣ್ಮುಖೇಶ್ವರ ದೇವಸ್ಥಾನದ ವಾರ್ಷಿಕ ರಥೋತ್ಸವವು ಸೋಮವಾರ (ಸಪ್ಟೆಂಬರ್ 21) ಅತ್ಯಂತ ಶ್ರದ್ಧಾ–ಭಕ್ತಿ ಹಾಗೂ ವೈಭವದಿಂದ ನೆರವೇರಿತು. ಸಾವಿರಾರು ಸದ್ಭಕ್ತರ ಹರ್ಷೋದ್ಗಾರದ ನಡುವೆ ಸಂಜೆ 6 ಗಂಟೆಗೆ ರಥೋತ್ಸವಕ್ಕೆ ಚಾಲನೆ ನೀಡಲಾಯಿತು.

ರಥೋತ್ಸವದ ನಿಮಿತ್ತ ಶ್ರೀ ಷಣ್ಮುಖೇಶ್ವರ ದೇವಸ್ಥಾನದ ಮಹಾರಥವನ್ನು ಬಣ್ಣಬಣ್ಣದ ಹೂವುಗಳು, ಕಣ್ಮನ ಸೆಳೆಯುವ ರುದ್ರಾಕ್ಷಿ ಹಾರ ಹಾಗೂ ಬೃಹತ್ ಕೇಸರಿ ಧ್ವಜಗಳಿಂದ ಅದ್ದೂರಿಯಾಗಿ ಅಲಂಕರಿಸಲಾಗಿತ್ತು. ದೇವಸ್ಥಾನದ ಮುಂಭಾಗದಿಂದ ಹೊರಟ ಮಹಾರಥವು, 200 ಮೀಟರ್ ದೂರದಲ್ಲಿರುವ ಪಾದಗಟ್ಟೆಯವರೆಗೆ ಭಕ್ತರ ಜಯಘೋಷಗಳೊಂದಿಗೆ ಯಾವುದೇ ಅಡ್ಡಿ ಆತಂಕಗಳಿಲ್ಲದೆ ಸುಗಮವಾಗಿ ಸಾಗಿಬಂತು.

ಮೆರವಣಿಗೆ ಹಾಗೂ ಭಕ್ತರ ಸೇವೆ:

ರಥೋತ್ಸವಕ್ಕೂ ಮುನ್ನ ತೇರಿನ ಮೀಣಿ (ಬೃಹತ್ ಹಗ್ಗ) ಮತ್ತು ಕಳಶವನ್ನು ಪ್ರಮುಖ ಬೀದಿಗಳಲ್ಲಿ ಕರಡಿ ಮಜಲು ಹಾಗೂ ಮಂಗಳವಾದ್ಯಗಳೊಂದಿಗೆ ಅದ್ದೂರಿಯಾಗಿ ಮೆರವಣಿಗೆ ಮಾಡಲಾಯಿತು. ತೇರು ಎಳೆಯುವ ವೇಳೆ ಸಾವಿರಾರು ಭಕ್ತರು ಉತ್ತತ್ತಿ ಮತ್ತು ಬಾಳೆಹಣ್ಣುಗಳನ್ನು ರಥಕ್ಕೆ ಎಸೆದು ತಮ್ಮ ಹರಕೆ ತೀರಿಸಿ, ಭಕ್ತಿ ಸಮರ್ಪಿಸಿದರು. ಕರಡಿ ಮಜಲು, ಬ್ಯಾಂಡ್ ಬಾಜಾ ಸೇರಿದಂತೆ ನಾನಾ ಜಾನಪದ ಕಲಾಮೇಳಗಳು ರಥೋತ್ಸವಕ್ಕೆ ಮೆರುಗು ನೀಡಿದವು.

ಗ್ರಾಮ ಸೇರಿದಂತೆ ಸುತ್ತಮುತ್ತಲಿನ ವಿವಿಧ ಹಳ್ಳಿಗಳಿಂದ ಆಗಮಿಸಿದ್ದ ಅಪಾರ ಸಂಖ್ಯೆಯ ಭಕ್ತಾದಿಗಳಿಗೆ ಸೂಕ್ತ ಅನುಕೂಲ ಮಾಡಿಕೊಡಲಾಗಿತ್ತು. ಯಾವುದೇ ಅಹಿತಕರ ಘಟನೆ ನಡೆಯದಂತೆ ಪೋಲಿಸ್ ಇಲಾಖೆಯಿಂದ ಬಿಗಿ ಬಂದೋಬಸ್ತ್ ಕೈಗೊಳ್ಳಲಾಗಿತ್ತು.



## ಹರಿಹರ ತಾಲೂಕು ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಂಘಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ

**ಹರಿಹರ:** ತಾಲೂಕಿನ ಪ್ರೌಢಶಾಲಾ ಮುಖ್ಯೋಪಾಧ್ಯಾಯರು ಹಾಗೂ ಉಪ ಪ್ರಾಂಶುಪಾಲರ ಸಂಘದ ತಾಲೂಕು ಘಟಕಕ್ಕೆ 2026–27ನೇ ಸಾಲಿನ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ.

ಮಲೆಬೆನ್ನೂರಿನ ಜಾಮಿಯಾ ನ್ಯಾಷನಲ್ ಪ್ರೌಢಶಾಲೆಯ ಮುಖ್ಯಶಿಕ್ಷಕ ಮೊಹಮ್ಮದ್ ಇಲಿಯಾಜ್ ಅವರು ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.

ಉಪಾಧ್ಯಕ್ಷರಾಗಿ ನಗರದ ಗುರು ತಿಪ್ಪೇರುದ್ರಸ್ವಾಮಿ ಪ್ರೌಢಶಾಲೆಯ ಮುಖ್ಯಶಿಕ್ಷಕ ರೇವಣನಾಯ್ಕ ಬಿ.ಬಿ., ಕಾರ್ಯದರ್ಶಿಯಾಗಿ ಕೊಕ್ಕನೂರು ಸರ್ಕಾರಿ ಪ್ರೌಢಶಾಲೆಯ ಮುಖ್ಯಶಿಕ್ಷಕ ಮಂಜಪ್ಪ ಯು.ಎಂ., ಖಜಾಂಚಿಯಾಗಿ ಹರಿಹರ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ಮುಖ್ಯಶಿಕ್ಷಕ ಫಯಾಜ್ ಅಹ್ಮದ್ ಆಯ್ಕೆಯಾಗಿದ್ದಾರೆ. ನಿರ್ದೇಶಕರಾಗಿ ಭಾನುವಳ್ಳಿಯ ಕರ್ನಾಟಕ ಪಬ್ಲಿಕ್ ಶಾಲೆಯ ಉಪಪ್ರಾಂಶುಪಾಲರಾದ ಮಹಬೂಬಿ, ಗುತ್ತೂರು ಸರ್ಕಾರಿ ಪ್ರೌಢಶಾಲೆಯ ಮುಖ್ಯಶಿಕ್ಷಕ ರವಿನಾಯ್ಕ, ಗುಳದಹಳ್ಳಿ ಸರ್ಕಾರಿ ಪ್ರೌಢಶಾಲೆಯ ಮುಖ್ಯಶಿಕ್ಷಕ ಸುರೇಶ ಎಂ., ಕಾಳಿದಾಸ ಪ್ರೌಢಶಾಲೆಯ ಮುಖ್ಯಶಿಕ್ಷಕ ನಿಜಲಿಂಗಪ್ಪ, ದೇವರಬೆಳಕೆರೆ ಮೈಲಾರಲಿಂಗೇಶ್ವರ ಪ್ರೌಢಶಾಲೆಯ ಮುಖ್ಯಶಿಕ್ಷಕ ವಿಜಯಕುಮಾರ ಓಲೇಕಾರ, ಜ್ಞಾನಾಕ್ಷಿ ವಿದ್ಯಾನಿಕೇತನ ಹೊಸಹಳ್ಳಿ ಮುಖ್ಯಶಿಕ್ಷಕ ಬಸವರಾಜ ಎಂ.ಎ. ಹಾಗೂ ಗಿರಿರಾಜ ಪ್ರೌಢಶಾಲೆಯ ಮುಖ್ಯಶಿಕ್ಷಕ ವೀರೇಶ ಎಂ. ಆಯ್ಕೆಯಾಗಿದ್ದಾರೆ ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.



SAMALOCHANE RANEBENNURSUDDI KANNADA DAILY MORNING, OWNER, PUBLISHER BY: RAJESHWARI S OLEKAR, PUBLISHED FROM: H.NO, 58 MAIN ROAD, YAKALASAPUR, SUB DISTRICT RANEBENNUR, HAVERI, KARNATAKA-581115, PRINTED AT: VEDAMURTHY S T, GAYATHRI PUBLICATIONS, H.NO, 720, NEKAR COLONY, INDUSTRIAL AREA, HAVERI, KARNATAKA- 581115, EDITOR BY: RAJESHWARI S OLEKAR